Volume : 9 | Issue : 156 | September : 05 : 2026 : Saturday
ಸಂಪುಟ : 9 | ಸಂಚಿಕೆ : 156 | ಸೆಪ್ಟಂಬರ್ : 05 : 2026 : ಶನಿವಾರ

www.VIKRAMAVAHINI.com
— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



ಮಹಿಳಾ ಪಾತ್ರಗಳ ವೈಭವೀಕರಣಕ್ಕೆ ತಾಪ್ಸಿ ಪನ್ನು ಆಕ್ಷೇಪಿಸಿದಾರೆ, ಸಿನಿಮಾಗಳಲ್ಲಿ ಮಹಿಳೆಯರನ್ನು ಗ್ಲಾಮರ್‌ಗಾಗಿ ಬಳಸುವ ಪ್ರವೃತ್ತಿ ಹೆಚ್ಚುತ್ತಿದೆ ಎಂದು ನಟ ತಾಪ್ಸಿ ಪನ್ನು ಬೇಸರ ವ್ಯಕ್ತಪಡಿಸಿದ್ದಾರೆ.

ಕೆರೆ ಒತ್ತುವರಿ ಮಾಡಿದರೆ ಕ್ರಿಮಿನಲ್ ಕೇಸ್: ಖಂಡ್ರೆ ಪುಟ 3

‘ರೋಡ್ ಮಾಡು ಟೋಲ್ ಹಾಕು ನೀತಿ’ ಪುಟ 4



## ■ ಸುದ್ದಿ ಚುಟುಕು

### ಗಾಂಜಾ ಸೇವನೆ ದೃಢ: ಏರ್ ಇಂಡಿಯಾ ಪೈಲಟ್ ವಜಾ

● ವಿಕ್ರಮ ವಾಹಿನಿ । ನವದೆಹಲಿ

ಫುಕೆಟ್‌ನಿಂದ ದೆಹಲಿಗೆ ಸಂಚರಿಸುತ್ತಿದ್ದ ಏರ್ ಇಂಡಿಯಾ ವಿಮಾನದ ಪೈಲಟ್–ಇನ್–ಕಮಾಂಡ್ ಮಾದಕ ವಸ್ತು ಸೇವನೆ ಪರೀಕ್ಷೆಯಲ್ಲಿ ಪಾಸಿಟಿವ್ ಬಂದ ಹಿನ್ನೆಲೆಯಲ್ಲಿ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ವಜಾಗೊಳಿಸಲಾಗಿದೆ ಎಂದು ಏರ್ ಇಂಡಿಯಾ ತಿಳಿಸಿದೆ.

ಆಗಸ್ಟ್ 4ರಂದು ಫುಕೆಟ್‌ನಿಂದ ದೆಹಲಿಗೆ ಬರುತ್ತಿದ್ದ ಏರ್‌ಬಸ್ ಎ320 ವಿಮಾನ ಹಾರಾಟದ ವೇಳೆ ಹಠಾತ್ತನೆ ಸುಮಾರು 300 ಅಡಿ ಕೆಳಕ್ಕೆ ಕುಸಿದಿತ್ತು. ವಿಮಾನದಲ್ಲಿ 137 ಪ್ರಯಾಣಿಕರು ಹಾಗೂ ಎಂಟು ಸಿಬ್ಬಂದಿ ಇದ್ದರು. ಬಳಿಕ ಪೈಲಟ್‌ಗಳು ವಿಮಾನದ ನಿಯಂತ್ರಣ ಪಡೆದು ದೆಹಲಿಯಲ್ಲಿ ಸುರಕ್ಷಿತವಾಗಿ ಇಳಿಸಿದರಾದರೂ, ಘಟನೆಯಲ್ಲಿ ಹಲವು ಪ್ರಯಾಣಿಕರು ಗಾಯಗೊಂಡಿದ್ದರು.

ಘಟನೆಯ ತನಿಖೆಯ ಭಾಗವಾಗಿ ವಿಮಾನದ ಪೈಲಟ್‌ಗಳಿಗೆ ಮಾದಕ ವಸ್ತು ಪರೀಕ್ಷೆ ನಡೆಸಲಾಗಿತ್ತು. ಸಹ–ಪೈಲಟ್‌ನ ಪರೀಕ್ಷಾ ವರದಿ ನೆಗೆಟಿವ್ ಬಂದಿದ್ದರೆ, ಮುಖ್ಯ ಪೈಲಟ್‌ನ ರಕ್ತ ಪರೀಕ್ಷೆಯಲ್ಲಿ ಸೈಕೋಆಕ್ಟಿವ್ ವಸ್ತು ಬಳಕೆ ದೃಢಪಟ್ಟಿದೆ ಎಂದು ತಿಳಿದುಬಂದಿದೆ. ಇದರ ಬೆನ್ನಲ್ಲೇ ಏರ್ ಇಂಡಿಯಾ ಶಿಸ್ತು ಕ್ರಮ ಕೈಗೊಂಡಿದೆ.

ಸುರಕ್ಷತೆಗೆ ಸಂಸ್ಥೆ ಅತ್ಯಂತ ಹೆಚ್ಚಿನ ಆದ್ಯತೆ ನೀಡುತ್ತದೆ. ಸುರಕ್ಷತೆ, ದೈಹಿಕ ಸಾಮರ್ಥ್ಯ ಹಾಗೂ ನಿಯಂತ್ರಕ ನಿಯಮಗಳ ಉಲ್ಲಂಘನೆಗೆ ಸಂಬಂಧಿಸಿದಂತೆ ಶೂನ್ಯ ಸಹಿಷ್ಣುತೆ ನೀತಿ ಅನುಸರಿಸಲಾಗುತ್ತದೆ. ಪೈಲಟ್‌ನ ಪರೀಕ್ಷಾ ವರದಿ ಪಾಸಿಟಿವ್ ಬಂದ ಹಿನ್ನೆಲೆಯಲ್ಲಿ ಅವರನ್ನು ಉದ್ಯೋಗದಿಂದ ವಜಾಗೊಳಿಸಲಾಗಿದೆ ಎಂದು ಏರ್ ಇಂಡಿಯಾ ವಕ್ತಾರರು ತಿಳಿಸಿದ್ದಾರೆ.

### ಬಾಲಕಿ ನಾಪತ್ತೆ ಪ್ರಕರಣ: ಆರೋಪಿ ಸವಾಲ್, ಪೋಲೀಸ್ ಕಕ್ಕಾಬಿಕ್ಕಿ

● ವಿಕ್ರಮ ವಾಹಿನಿ । ಗುಂಟೂರು

ಇನ್‌ಸ್ಟಾಗ್ರಾಮ್ ಮೂಲಕ ಪರಿಚಯವಾದ ಯುವಕನೊಬ್ಬ 15 ವರ್ಷದ ಬಾಲಕಿಯನ್ನು ಅಪಹರಿಸಿದ್ದಾನೆ ಎಂಬ ಆರೋಪದ ಪ್ರಕರಣದಲ್ಲಿ, ಮೂರು ತಿಂಗಳಾದರೂ ಬಾಲಕಿ ಪತ್ತೆಯಾಗದ ಹಿನ್ನೆಲೆಯಲ್ಲಿ ಪೊಲೀಸರು ವಿಶೇಷ ತಂಡ ರಚಿಸಿ ಶೋಧ ಕಾರ್ಯಾಚರಣೆ ಮುಂದುವರಿಸಿದ್ದಾರೆ. ಪ್ರಕರಣದ ತನಿಖೆಯಲ್ಲಿ ಪ್ರಗತಿ ಕಂಡುಬರದ ಬಗ್ಗೆ ಹೈಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ.

ಗುಂಟೂರಿನ ಖಾಸಗಿ ಶಾಲೆಯಲ್ಲಿ 10ನೇ ತರಗತಿ ವ್ಯಾಸಂಗ ಮಾಡುತ್ತಿದ್ದ ಬಾಲಕಿ ಜೂ.9ರಂದು ಟ್ಯೂಷನ್‌ನಿಂದ ಮನೆಗೆ ಮರಳಿದ ಬಳಿಕ ಅಂಗಡಿಗೆ ಹೋಗುವುದಾಗಿ ಹೇಳಿ ತೆರಳಿದ್ದಳು. ರಾತ್ರಿ ಕಳೆದರೂ ಮನೆಗೆ ವಾಪಸಾಗದ ಹಿನ್ನೆಲೆಯಲ್ಲಿ ಕುಟುಂಬಸ್ಥರು ಹುಡುಕಾಟ ನಡೆಸಿ, ಜೂ.10ರಂದು ಪಟ್ಟಾಭಿಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಮನೆಯಿಂದ ತೆರಳುವಾಗ ನಗದು ಹಾಗೂ ಚಿನ್ನಾಭರಣಗಳನ್ನು ತೆಗೆದುಕೊಂಡು ಹೋಗಿರುವುದು ಪೋಷಕರ ಗಮನಕ್ಕೆ ಬಂದಿತ್ತು. 2ನೇ ಪುಟಕ್ಕೆ...

### ಬುಡ್ಗಾಮ್ ಎನ್‌ಕೌಂಟರ್‌ನಲ್ಲಿ ಉಗ್ರನ ಹತ್ಯೆ

● ವಿಕ್ರಮ ವಾಹಿನಿ । ಬುಡ್ಗಾಮ್

ಜಮ್ಮು ಮತ್ತು ಕಾಶ್ಮೀರದ ಬುಡ್ಗಾಮ್ ಜಿಲ್ಲೆಯ ಅಶ್ದಾರ್ ಗಲಿ ಅರಣ್ಯ ಪ್ರದೇಶದಲ್ಲಿ ಶುಕ್ರವಾರ ಭದ್ರತಾ ಪಡೆಗಳು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಒಬ್ಬ ಉಗ್ರನನ್ನು ಹತ್ಯೆ ಮಾಡಲಾಗಿದೆ. ಪ್ರದೇಶದಲ್ಲಿ ಇನ್ನಿಬ್ಬರು ಉಗ್ರರು ಅಡಗಿರುವ ಶಂಕೆ ಹಿನ್ನೆಲೆಯಲ್ಲಿ ಶೋಧ ಕಾರ್ಯಾಚರಣೆ ಮುಂದುವರಿದಿದೆ.

ಪುಲ್ವಾಮಾ ಮತ್ತು ಪೂಂಚ್ ಜಿಲ್ಲೆಗಳ ಗಡಿ ಸಮೀಪದ ಪಿರ್ ಪಂಜಾಲ್ ಪರ್ವತ ಶ್ರೇಣಿಯ ಎತ್ತರದ ಪ್ರದೇಶದಲ್ಲಿ ಉಗ್ರರ ಚಲನವಲನದ ಕುರಿತು ಗುಪ್ತಚರ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ಸೇನೆ, ಸಿಆರ್‌ಪಿಎಫ್ ಹಾಗೂ ಜಮ್ಮು–ಕಾಶ್ಮೀರ ಪೊಲೀಸರ ವಿಶೇಷ ಕಾರ್ಯಾಚರಣೆ ತಂಡ ಜಂಟಿಯಾಗಿ ಶೋಧ ನಡೆಸಿತು.

ಈ ವೇಳೆ ಅನುಮಾನಾಸ್ಪದ ಚಲನವಲನ ಗಮನಿಸಿದ ಭದ್ರತಾ ಪಡೆಗಳು ಕಾರ್ಯಾಚರಣೆ ನಡೆಸಿದಾಗ ಉಗ್ರರು ಗುಂಡಿನ ದಾಳಿ ನಡೆಸಿದ್ದಾರೆ. ಇದಕ್ಕೆ ಪ್ರತಿಯಾಗಿ ನಡೆದ ಗುಂಡಿನ ಚಕಮಕಿಯಲ್ಲಿ ಒಬ್ಬ ಉಗ್ರ ಹತನಾಗಿದ್ದಾನೆ ಎಂದು ಸೇನೆಯ ಚಿನಾರ್ ಕಾರ್ಪ್ಸ್ ತಿಳಿಸಿದೆ.

# ಕೆಐಎಡಿಬಿ ಭೂ ಹಂಚಿಕೆಯಲ್ಲಿ ಅಕ್ರಮ

**ಕೆಐಎಡಿಬಿ ಭೂ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿರುವ ಛಲವಾದಿ ನಾರಾಯಣಸ್ವಾಮಿ, ಒಂದೇ ವ್ಯಕ್ತಿಗೆ ಎಸ್‌ಸಿ/ಎಸ್‌ಟಿ ಕೋಟಾದಡಿ ಕೋಟ್ಯಂತರ ರೂ. ಮೌಲ್ಯದ ಜಮೀನು ಹಂಚಿಕೆಯಾಗಿದೆ ಎಂದು ದೂರಿದ್ದಾರೆ. ಪ್ರಕರಣದ ಕುರಿತು ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸುವಂತೆ ಆಗ್ರಹಿಸಿರುವ ಅವರು, 15 ದಿನಗಳಲ್ಲಿ ಮತ್ತಷ್ಟು ದಾಖಲೆ ಬಿಡುಗಡೆ ಮಾಡುವುದಾಗಿ ಹೇಳಿದ್ದಾರೆ.**

● ವಿಕ್ರಮ ವಾಹಿನಿ । ಬೆಂಗಳೂರು

*ಕೆಐಎಡಿಬಿಯಲ್ಲಿ (ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ) ಎಸ್‌ಸಿ/ಎಸ್‌ಟಿ ಕೋಟಾದಡಿ ಭೂ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂದು ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ. ಒಂದೇ ವ್ಯಕ್ತಿಗೆ ಸುಮಾರು 250 ಕೋಟಿ ಮೌಲ್ಯದ 15ರಿಂದ 17 ಎಕರೆ ಭೂಮಿಯನ್ನು ವಿವಿಧ ಹಂತಗಳಲ್ಲಿ ಹಂಚಿಕೆ ಮಾಡಲಾಗಿದೆ ಎಂದು ಅವರು ದೂರಿದ್ದಾರೆ.*

*ಮಂಜುನಾಥ್ ಎಂಬ ವ್ಯಕ್ತಿಗೆ ಎಸ್‌ಸಿ/ಎಸ್‌ಟಿ ಕೋಟಾದಡಿ ಶೇ.75ರಷ್ಟು ರಿಯಾಯಿತಿ ಪಡೆದು ಸುಮಾರು 10 ಕಡೆಗಳಲ್ಲಿ ಒಟ್ಟು 15ರಿಂದ 17 ಎಕರೆ ಜಮೀನು ಹಂಚಿಕೆ ಮಾಡಲಾಗಿದೆ. ದೇವನಹಳ್ಳಿಯ ಏರೋಸ್ಪೇಸ್ ಪ್ರದೇಶದಲ್ಲಿನ ಭೂಮಿಯೂ ಇದರಲ್ಲಿ ಸೇರಿದ್ದು, ಈ ಹಂಚಿಕೆಯಲ್ಲಿ ಅಕ್ರಮ ನಡೆದಿರುವ ಶಂಕೆಯಿದೆ ಎಂದು ಛಲವಾದಿ ನಾರಾಯಣಸ್ವಾಮಿ ಹೇಳಿದ್ದಾರೆ.*

*ಮೊದಲ ಹಂತದಲ್ಲಿ ಎರಡು ಎಕರೆ ಜಮೀನು ಪಡೆದುಕೊಂಡ ಬಳಿಕ ತಾಯಿ, ಪತ್ನಿ, ಪತ್ನಿಯ ತಾಯಿ ಹಾಗೂ ಇತರ ಕಂಪನಿಗಳಿಗೆ ಸಂಬಂಧಿಸಿದ ಭೂ ಹಂಚಿಕೆಗಳಲ್ಲೂ ಮಂಜುನಾಥ್ ಅವರಿಗೆ ಜಮೀನು ದೊರೆತಿದೆ ಎಂದು ಅವರು ಆರೋಪಿಸಿದ್ದಾರೆ.*

*ಸಿದ್ಧಾರ್ಥ ಟ್ರಸ್ಟ್‌ಗೆ ಹಂಚಿಕೆಯಾಗಿದ್ದ ಜಮೀನು ವಾಪಸ್ ಪಡೆದ ಬಳಿಕ ಅದರಲ್ಲೂ ಮಂಜುನಾಥ್ ಅವರಿಗೆ ಭೂಮಿ ಹಂಚಿಕೆಯಾಗಿದೆ ಎಂಬ ಆರೋಪವನ್ನು ಅವರು ಮಾಡಿದ್ದಾರೆ.*

*ಇದೇ ವೇಳೆ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಅವರ ಹಣಕಾಸು ವ್ಯವಹಾರಗಳ ಬಗ್ಗೆಯೂ ಛಲವಾದಿ ನಾರಾಯಣಸ್ವಾಮಿ ಪ್ರಶ್ನೆಗಳನ್ನು ಎತ್ತಿದ್ದಾರೆ.*

*ಬಾಗಮನೆ ಎಸ್ಟೇಟ್ ಡೆವಲಪರ್ಸ್ ಕಂಪನಿಯಿಂದ ಸಚಿವರು 4 ಕೋಟಿ ಸಾಲ ಪಡೆದಿರುವುದಾಗಿ ಚುನಾವಣಾ ಆಯೋಗಕ್ಕೆ ಸಲ್ಲಿಸಿರುವ ಅಫಿಡವಿಟ್‌ನಲ್ಲಿ ಉಲ್ಲೇಖಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಈ ಹಿನ್ನೆಲೆಯಲ್ಲಿ ಸಚಿವರು ಮತ್ತು ಕಂಪನಿಯ ನಡುವಿನ ಸಂಬಂಧ ಹಾಗೂ ಹಣಕಾಸು ವ್ಯವಹಾರದ ಬಗ್ಗೆ ತನಿಖೆ ಅಗತ್ಯ ಎಂದು ಒತ್ತಾಯಿಸಿದ್ದಾರೆ.*

*ಈ ಎಲ್ಲ ಆರೋಪಗಳ ಕುರಿತು ನ್ಯಾಯಾಧೀಶರ ನೇತೃತ್ವದಲ್ಲಿ ಸಮಗ್ರ ತನಿಖೆ ನಡೆಸಬೇಕು ಎಂದು ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದ್ದಾರೆ. 15 ದಿನಗಳ ಬಳಿಕ ಮತ್ತಷ್ಟು ದಾಖಲೆಗಳನ್ನು ಬಿಡುಗಡೆ ಮಾಡುವುದಾಗಿ ತಿಳಿಸಿರುವ ಅವರು, ಸೂಕ್ತ ತನಿಖೆ ನಡೆಯದಿದ್ದರೆ ನ್ಯಾಯಾಲಯದ ಮೊರೆ ಹೋಗುವುದಾಗಿಯೂ ಎಚ್ಚರಿಕೆ ನೀಡಿದ್ದಾರೆ.*

# ಬಸ್ ದರ ಏರಿಕೆ ಸಾಧ್ಯತೆ?

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಜನಸಾಮಾನ್ಯರಿಗೆ ಶೀಘ್ರದಲ್ಲೇ ಸಾರಿಗೆ ಬಸ್ ಪ್ರಯಾಣ ದರ ಏರಿಕೆಯ ಬಿಸಿ ತಟ್ಟುವ ಸಾಧ್ಯತೆ ಇದೆ. ರಾಜ್ಯದ ನಾಲ್ಕೂ ಸಾರಿಗೆ ನಿಗಮಗಳ ಆರ್ಥಿಕ ಪರಿಸ್ಥಿತಿ ಹಾಗೂ ಹೆಚ್ಚುತ್ತಿರುವ ನಿರ್ವಹಣಾ ವೆಚ್ಚವನ್ನು ಪರಿಗಣಿಸಿ ಬಸ್ ಟಿಕೆಟ್ ದರ ಪರಿಷ್ಕರಣೆಗೆ ಸರ್ಕಾರ ಮುಂದಾಗಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.



ಕಳೆದ ಕೆಲವು ತಿಂಗಳಿಂದ ಪೆಟ್ರೋಲ್, ಡೀಸೆಲ್ ಸೇರಿದಂತೆ ತೈಲೋತ್ಪನ್ನಗಳ ಬೆಲೆಯಲ್ಲಿ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಸಾರಿಗೆ ನಿಗಮಗಳ ಮೇಲಿನ ಆರ್ಥಿಕ ಹೊರೆ ಹೆಚ್ಚಾಗಿದೆ. ಇಂಧನ ದರ ಏರಿಕೆಯ ನಡುವೆಯೂ ರಾಜ್ಯದಲ್ಲಿ ಬಸ್ ಪ್ರಯಾಣ ದರವನ್ನು ಪರಿಷ್ಕರಿಸದ ಕಾರಣ ನಾಲ್ಕೂ ಸಾರಿಗೆ ನಿಗಮಗಳು ಸಾವಿರಾರು ಕೋಟಿ ರೂಪಾಯಿ ನಷ್ಟ ಅನುಭವಿಸುತ್ತಿವೆ ಎಂದು ಸಚಿವರು ಹೇಳಿದ್ದಾರೆ.

ದರ ಪರಿಷ್ಕರಣೆಯ ಪ್ರಮಾಣ ಹಾಗೂ ಹೊಸ ದರದ ಕುರಿತು ಅಧ್ಯಯನ ನಡೆಸಲು ನಿವೃತ್ತ ಹಿರಿಯ ಐಎಎಸ್ ಅಧಿಕಾರಿ ಅತುಲ್ ತಿವಾರಿ ಅವರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ. ಸಮಿತಿಯು ಸಾರಿಗೆ ನಿಗಮಗಳ ಆದಾಯ–ವೆಚ್ಚ, ಇಂಧನ ದರ, ನಿರ್ವಹಣಾ ವೆಚ್ಚ ಹಾಗೂ ಪ್ರಯಾಣಿಕರ ಮೇಲಿನ ಪರಿಣಾಮ ಸೇರಿದಂತೆ ವಿವಿಧ ಅಂಶಗಳನ್ನು ಪರಿಶೀಲಿಸುತ್ತಿದ್ದು, ಶೀಘ್ರದಲ್ಲೇ ಸರ್ಕಾರಕ್ಕೆ ಅಂತಿಮ ವರದಿ ಸಲ್ಲಿಸುವ ನಿರೀಕ್ಷೆಯಿದೆ.

ಸಮಿತಿಯ ವರದಿ ಬಂದ ಬಳಿಕ ಅದರ ಶಿಫಾರಸುಗಳನ್ನು ಪರಿಶೀಲಿಸಿ ಬಸ್ ಪ್ರಯಾಣ ದರ ಪರಿಷ್ಕರಣೆ ಕುರಿತು ಸರ್ಕಾರ ಅಂತಿಮ ನಿರ್ಧಾರ ಕೈಗೊಳ್ಳಲಿದೆ. ಆದರೆ, ಪ್ರಸ್ತುತ ರಾಜ್ಯದಲ್ಲಿ ಬರ ಪರಿಸ್ಥಿತಿ ಇರುವುದರಿಂದ ಜನಸಾಮಾನ್ಯರ ಮೇಲೆ ಹೆಚ್ಚಿನ ಆರ್ಥಿಕ ಹೊರೆ ಬೀಳದಂತೆ ಎಚ್ಚರಿಕೆ ವಹಿಸಲಾಗುವುದು. ಅಗತ್ಯವಿದ್ದಲ್ಲಿ ಸೀಮಿತ ಪ್ರಮಾಣದಲ್ಲಿ ಮಾತ್ರ ದರ ಹೆಚ್ಚಳ ಮಾಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಲಿದೆ ಎಂದು ಬೈರತಿ ಸುರೇಶ್ ತಿಳಿಸಿದ್ದಾರೆ. ದರ ಏರಿಕೆ ಅನಿವಾರ್ಯವಾದರೆ ಸಾಮಾನ್ಯ ಪ್ರಯಾಣಿಕರು, ವಿದ್ಯಾರ್ಥಿಗಳು ಹಾಗೂ ದಿನನಿತ್ಯ ಬಸ್ ಅವಲಂಬಿಸುವ ವರ್ಗದ ಮೇಲೆ ಕಡಿಮೆ ಪರಿಣಾಮ ಬೀರುವ ರೀತಿಯಲ್ಲಿ ಪರಿಷ್ಕರಣೆ ಮಾಡುವ ಅಗತ್ಯವಿದೆ ಎಂಬ ಅಭಿಪ್ರಾಯವೂ ವ್ಯಕ್ತವಾಗಿದೆ. ಸಾರಿಗೆ ನಿಗಮಗಳ ಆರ್ಥಿಕ ಸ್ಥಿತಿ ಸುಧಾರಿಸುವುದರ ಜತೆಗೆ ಪ್ರಯಾಣಿಕರಿಗೆ ಗುಣಮಟ್ಟದ ಸೇವೆ ಮುಂದುವರಿಸುವುದು ಸರ್ಕಾರದ ಮುಂದಿರುವ ಪ್ರಮುಖ ಸವಾಲಾಗಿದೆ.

## ಲೋಕಾ ವೈಖರಿಗೆ ಹೈ ಅಸಮಾಧಾನ

● ವಿಕ್ರಮ ವಾಹಿನಿ । ಬೆಂಗಳೂರು

ಭ್ರಷ್ಟಾಚಾರ ಪ್ರಕರಣಗಳಲ್ಲಿ ಆರೋಪಿಗಳ ವಿರುದ್ಧ ಮೇಲ್ನೋಟಕ್ಕೆ ಸಾಕ್ಷ್ಯಗಳಿದ್ದರೂ, ಲೋಕಾಯುಕ್ತ ಅಧಿಕಾರಿಗಳು ಶಾಸನಬದ್ಧ ನಿಯಮಗಳನ್ನು ಪಾಲಿಸದೆ ತನಿಖೆ ನಡೆಸಿದರೆ ತಪ್ಪಿತಸ್ಥರು ಕಾನೂನಿನ ಕುಣಿಕೆಯಿಂದ ಪಾರಾಗುವ ಸಾಧ್ಯತೆ ಇದೆ ಎಂದು ಹೈಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ.

ಸರ್ಕಾರಿ ನೌಕರರ ವಿರುದ್ಧ ಶಿಸ್ತು ಕ್ರಮ ಅಥವಾ ಇಲಾಖಾ ವಿಚಾರಣೆ ನಡೆಸುವಾಗ ಲೋಕಾಯುಕ್ತ ಕಾಯ್ದೆಯ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ನಿಯಮ ಉಲ್ಲಂಘಿಸಿ ನಡೆಸಿದ ವಿಚಾರಣೆ ಕಾನೂನುಬದ್ಧವಾಗಿರುವುದಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಜಮಖಂಡಿಯ ಸರ್ಕಾರಿ ಉರ್ದು ಮಾದರಿ ಶಾಲೆಯ ಸಹ ಶಿಕ್ಷಕ ಯೂಸುಫ್ ಯಾಕೂಬ್ ಅಲ್ಲೂರ್ ಅವರಿಗೆ ವಿಧಿಸಿದ್ದ ಶಿಕ್ಷೆಯನ್ನು ಕರ್ನಾಟಕ ಆಡಳಿತಾತ್ಮಕ ನ್ಯಾಯಮಂಡಳಿ ರದ್ದುಪಡಿಸಿದ ಆದೇಶ ಪ್ರಶ್ನಿಸಿ ಉಪಲೋಕಾಯುಕ್ತರು ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಚ್.ಟಿ. ನರೇಂದ್ರ ಪ್ರಸಾದ್ ಹಾಗೂ ನ್ಯಾಯ ಮೂರ್ತಿ ರಾಘವೇಂದ್ರ ಸೀತಾರಾಮ ಶ್ರೀವತ್ಸ ಅವರ ವಿಭಾಗೀಯ ಪೀಠ ವಿಚಾರಣೆ ನಡೆಸಿ ಅರ್ಜಿ ವಜಾಗೊಳಿಸಿದೆ. 2ನೇ ಪುಟಕ್ಕೆ...

# 31 ಶಿಕ್ಷಕರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಸರ್ಕಾರವು 2026–27ನೇ ಸಾಲಿನ ರಾಜ್ಯಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿಗೆ 31 ಶಿಕ್ಷಕರನ್ನು ಆಯ್ಕೆ ಮಾಡಿದೆ. ಪ್ರಾಥಮಿಕ ಶಾಲಾ ವಿಭಾಗದಿಂದ 20 ಹಾಗೂ ಪ್ರೌಢಶಾಲಾ ವಿಭಾಗದಿಂದ 11 ಶಿಕ್ಷಕರು ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಪ್ರಶಸ್ತಿ ಪುರಸ್ಕೃತರಿಗೆ ತಲಾ 25 ಸಾವಿರ ನಗದು ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು. ಸೆ.5ರಂದು ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ನಡೆಯಲಿರುವ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ನಡೆಯಲಿದೆ.

ಪ್ರಾಥಮಿಕ ವಿಭಾಗದಲ್ಲಿ ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಉಡುಪಿ, ರಾಯಚೂರು, ವಿಜಯಪುರ, ಉತ್ತರ ಕನ್ನಡ, ಚಿಕ್ಕಬಳ್ಳಾಪುರ, ಚಾಮರಾಜನಗರ, ಕಲಬುರಗಿ, ಬೆಂಗಳೂರು, ಬಾಗಲಕೋಟೆ, ಶಿವಮೊಗ್ಗ, ದಾವಣಗೆರೆ, ತುಮಕೂರು, ಬಳ್ಳಾರಿ ಹಾಗೂ ಕೊಪ್ಪಳ ಜಿಲ್ಲೆಗಳ ಶಿಕ್ಷಕರು ಆಯ್ಕೆಯಾಗಿದ್ದಾರೆ.

ಪ್ರೌಢಶಾಲಾ ವಿಭಾಗದಲ್ಲಿ ಶಿರಸಿ, ಬೆಂಗಳೂರು, ಶಿವಮೊಗ್ಗ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಮೈಸೂರು, ಚಿಕ್ಕಮಗಳೂರು, ದಾವಣಗೆರೆ ಹಾಗೂ ವಿಜಯಪುರ ಜಿಲ್ಲೆಗಳ ಶಿಕ್ಷಕರು ಪ್ರಶಸ್ತಿಗೆ ಆಯ್ಕೆಯಾಗಿದ್ದು, ವಿಜಯಪುರದ ವಿಶೇಷ ಶಿಕ್ಷಕ ಆನಂದ ಮಾದೇವ ಝುಂಡೆ ಅವರೂ ಗೌರವಕ್ಕೆ ಪಾತ್ರರಾಗಿದ್ದಾರೆ.

ಶಿಕ್ಷಕರ ಶೈಕ್ಷಣಿಕ ಸಾಧನೆ, ಉತ್ತಮ ಬೋಧನೆ, ವಿದ್ಯಾರ್ಥಿಗಳ ಪ್ರಗತಿ ಹಾಗೂ ಶಾಲಾ ಅಭಿವೃದ್ಧಿಗೆ ನೀಡಿದ ಕೊಡುಗೆಗಳನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಪ್ರಶಸ್ತಿಗಾಗಿ ಒಟ್ಟು 7.75 ಲಕ್ಷ ವೆಚ್ಚವಾಗಲಿದ್ದು, ಶಿಕ್ಷಕರ ಕಲ್ಯಾಣ ಹಾಗೂ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿಯಿಂದ ಭರಿಸಲು ಸರ್ಕಾರ ಅನುಮತಿ ನೀಡಿದೆ.

ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ನೀಡಲಾಗುವ ಗೌರವವು ರಾಜ್ಯದಾದ್ಯಂತ ಗುಣಮಟ್ಟದ ಶಿಕ್ಷಣ ಹಾಗೂ ಉತ್ತಮ ಬೋಧನಾ ಪದ್ಧತಿಗಳಿಗೆ ಉತ್ತೇಜನ ನೀಡುವ ಉದ್ದೇಶ ಹೊಂದಿದೆ.

ವಿದ್ಯಾರ್ಥಿಗಳ ಕಲಿಕಾ ಮಟ್ಟ ಸುಧಾರಣೆ, ಹೊಸ ಬೋಧನಾ ವಿಧಾನಗಳ ಅಳವಡಿಕೆ ಹಾಗೂ ಶಾಲೆಗಳಲ್ಲಿ ಶೈಕ್ಷಣಿಕ ವಾತಾವರಣ ನಿರ್ಮಾಣಕ್ಕೆ ಶಿಕ್ಷಕರು ನೀಡಿರುವ ಕೊಡುಗೆಯನ್ನು ಆಯ್ಕೆಯ ವೇಳೆ ಪರಿಗಣಿಸಲಾಗಿದೆ.

ರಾಜ್ಯದ ವಿವಿಧ ಜಿಲ್ಲೆಗಳಿಂದ ಶಿಕ್ಷಕರನ್ನು ಆಯ್ಕೆ ಮಾಡುವ ಮೂಲಕ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿನ ಉತ್ತಮ ಬೋಧನಾ ಕಾರ್ಯಗಳಿಗೆ ಸಮಾನ ಮಾನ್ಯತೆ ನೀಡಲಾಗಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯ ಜತೆಗೆ ಶಾಲಾ ಮೂಲಸೌಕರ್ಯ, ಶಿಸ್ತು, ಸೃಜನಶೀಲ ಚಟುವಟಿಕೆಗಳು ಮತ್ತು ಸಮುದಾಯದ ಸಹಭಾಗಿತ್ವ ಹೆಚ್ಚಿಸುವಲ್ಲಿ ಶಿಕ್ಷಕರು ವಹಿಸಿರುವ ಪಾತ್ರಕ್ಕೂ ಆದ್ಯತೆ ನೀಡಲಾಗಿದೆ.

ಶಿಕ್ಷಕರ ದಿನಾಚರಣೆ ಸಂದರ್ಭದಲ್ಲಿ ಪ್ರಶಸ್ತಿ ಪ್ರದಾನ ಮಾಡುವ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ ಶಿಕ್ಷಕರನ್ನು ಪ್ರೋತ್ಸಾಹಿಸಲು ಸರ್ಕಾರ ಮುಂದಾಗಿದೆ. ರಾಜ್ಯಮಟ್ಟದ ಈ ಗೌರವವು ಇತರ ಶಿಕ್ಷಕರಿಗೂ ಮತ್ತಷ್ಟು ಸ್ಫೂರ್ತಿ ನೀಡುವ ಮೂಲಕ ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲು ಸಹಕಾರಿಯಾಗಲಿದೆ.

## ಆರ್‌ಜಿ ಕರ್ ಪ್ರಕರಣ: ಬೆಂಗಳೂರಿನಲ್ಲಿ ಟಿಎಂಸಿ ನಾಯಕ ಬಂಧನ

● ವಿಕ್ರಮ ವಾಹಿನಿ । ಬೆಂಗಳೂರು

ದೇಶಾದ್ಯಂತ ಸಂಚಲನ ಮೂಡಿಸಿದ್ದ ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಕ್ಷ್ಯ ನಾಶಪಡಿಸುವ ಸಂಚಿನಲ್ಲಿ ಭಾಗಿಯಾಗಿದ್ದ ಆರೋಪದ ಮೇಲೆ ತೃಣಮೂಲ ಕಾಂಗ್ರೆಸ್ (ಟಿಎಂಸಿ) ನಾಯಕ ಹಾಗೂ ಪಾಣಿಹಟಿ ಪುರಸಭೆಯ ಮಾಜಿ ಅಧ್ಯಕ್ಷ ಸೋಮನಾಥ್ ಡೇ ಅವರನ್ನು ಪಶ್ಚಿಮ ಬಂಗಾಳ ಪೊಲೀಸರು ಬೆಂಗಳೂರಿನಲ್ಲಿ ಬಂಧಿಸಿದ್ದಾರೆ.

ಮೃತದೇಹದ ಎರಡನೇ ಮರಣೋತ್ತರ ಪರೀಕ್ಷೆಗೆ ಅವಕಾಶವಾಗದಂತೆ ತರಾತುರಿಯಲ್ಲಿ ಅಂತ್ಯಸಂಸ್ಕಾರ ನಡೆಸಲು ಹಾಗೂ ಸಾಕ್ಷ್ಯ ನಾಶಪಡಿಸಲು ಸಂಚು ರೂಪಿಸಲಾಗಿತ್ತು ಎಂಬ ಆರೋಪ ಸೋಮನಾಥ್ ಡೇ ವಿರುದ್ಧ ಕೇಳಿಬಂದಿದೆ. ಮೃತೆಯ ಕುಟುಂಬದ ದೂರಿನ ಆಧಾರದ ಮೇಲೆ ಈ ಸಂಬಂಧ ಹೊಸದಾಗಿ ಎಫ್‌ಐಆರ್ ದಾಖಲಿಸಲಾಗಿತ್ತು.

ಪ್ರಕರಣ ದಾಖಲಾಗುತ್ತಿದ್ದಂತೆ ಸೋಮನಾಥ್ ಡೇ ತಲೆಮರೆಸಿಕೊಂಡಿದ್ದರು ಎನ್ನಲಾಗಿದ್ದು, ಮೊದಲು ಹೈದರಾಬಾದ್‌ಗೆ ತೆರಳಿದ್ದರು. ಬಳಿಕ ಬೆಂಗಳೂರಿಗೆ ಬಂದು ಅಡಗಿಕೊಂಡಿದ್ದರು. ಖಚಿತ ಮಾಹಿತಿ ಆಧರಿಸಿ ಪಶ್ಚಿಮ ಬಂಗಾಳದ ಖಾರ್ದಾ ಠಾಣೆಯ ಪೊಲೀಸರು ಬೆಂಗಳೂರಿಗೆ ಆಗಮಿಸಿ ಬುಧವಾರ ತಡರಾತ್ರಿ ಅವರನ್ನು ವಶಕ್ಕೆ ಪಡೆದಿದ್ದಾರೆ.

**ಮೂರನೇ ಬಂಧನ**

ಅಂತ್ಯಸಂಸ್ಕಾರಕ್ಕೆ ಸಂಬಂಧಿಸಿದ ಸಾಕ್ಷ್ಯ ನಾಶದ ಆರೋಪದ ಪ್ರಕರಣದಲ್ಲಿ ಇದು ಮೂರನೇ ಬಂಧನವಾಗಿದೆ. ಈ ಹಿಂದೆ ಟಿಎಂಸಿ ಮಾಜಿ ಶಾಸಕ ನಿರ್ಮಲ್ ಘೋಷ್ ಹಾಗೂ ಸ್ಥಳೀಯ ಕೌನ್ಸಿಲರ್ ಸಂಜೀವ್ ಮುಖರ್ಜಿ ಅವರನ್ನು ಪೊಲೀಸರು ಬಂಧಿಸಿದ್ದರು.

ಸೋಮನಾಥ್ ಡೇ ಅವರನ್ನು ವಿಚಾರಣೆಗೆ ಒಳಪಡಿಸಿರುವ ಪೊಲೀಸರು, ಪ್ರಕರಣದಲ್ಲಿ ಸಾಕ್ಷ್ಯ ನಾಶಕ್ಕೆ ಯತ್ನಿಸಲಾಗಿತ್ತೇ ಹಾಗೂ ಅಂತ್ಯಸಂಸ್ಕಾರಕ್ಕೆ ಸಂಬಂಧಿಸಿದ ನಿರ್ಧಾರಗಳಲ್ಲಿ ಅವರ ಪಾತ್ರವೇನು ಎಂಬುದರ ಕುರಿತು ತನಿಖೆ ಮುಂದುವರಿಸಿದ್ದಾರೆ.

# ಬೆಂಗಳೂರು ಪ್ರಮುಖ ಫ್ಲೈಓವರ್‌ಗಳ ಮೇಲೆ ಸಂಚಾರ ನಿಷೇಧ?

**ಅಪಘಾತ ನಿಯಂತ್ರಣಕ್ಕೆ ಸಂಚಾರ ಪೊಲೀಸರ ಕ್ರಮ; ಐದು ಪ್ರಮುಖ ಫ್ಲೈಓವರ್‌ಗಳಲ್ಲಿ ದ್ವಿಚಕ್ರ, ಆಟೋ ಹಾಗೂ ಸರಕು ವಾಹನಗಳ ಸಂಚಾರಕ್ಕೆ ಸಮಯಾನುಸಾರ ನಿರ್ಬಂಧ ವಿಧಿಸಲಾಗಿದೆ. 19 ತಿಂಗಳಲ್ಲಿ 41 ಮಂದಿ ಮೃತಪಟ್ಟಿರುವ ಹಿನ್ನೆಲೆಯಲ್ಲಿ ಪ್ರಾಯೋಗಿಕವಾಗಿ ಜಾರಿಗೊಳಸಿರುವ ನಿಯಮಗಳ ಪರಿಣಾಮ ಪರಿಶೀಲಿಸಿ ಶಾಶ್ವತ ನಿರ್ಧಾರ ಕೈಗೊಳ್ಳಲಾಗುವುದು.**

● ವಿಕ್ರಮ ವಾಹಿನಿ । ಬೆಂಗಳೂರು

ಹೆಚ್ಚುತ್ತಿರುವ ರಸ್ತೆ ಅಪಘಾತ ಹಾಗೂ ಸಂಚಾರ ದಟ್ಟಣೆ ನಿಯಂತ್ರಿಸುವ ಉದ್ದೇಶದಿಂದ ನಗರದ ಪ್ರಮುಖ ಐದು ಫ್ಲೈಓವರ್‌ಗಳು ಮತ್ತು ಎಲಿವೇಟೆಡ್ ಕಾರಿಡಾರ್‌ಗಳಲ್ಲಿ ದ್ವಿಚಕ್ರ ವಾಹನ, ಆಟೋರಿಕ್ಷಾ ಹಾಗೂ ಸರಕು ಸಾಗಣೆ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ. ಹೊಸ ನಿಯಮಗಳು ಹಂತ ಹಂತವಾಗಿ ಜಾರಿಗೆ ಬರಲಿವೆ.

ಮೈಸೂರು ರಸ್ತೆಯ ಬಿಜಿಎಸ್ ಫ್ಲೈಓವರ್‌ನಲ್ಲಿ ಭಾರಿ ಸರಕು ವಾಹನಗಳ ಸಂಚಾರಕ್ಕೆ 24 ಗಂಟೆಯೂ ನಿಷೇಧವಿದ್ದು, ಇತರ ಸರಕು ವಾಹನಗಳಿಗೆ ಬೆಳಗ್ಗೆ 7ರಿಂದ 11 ಹಾಗೂ ಸಂಜೆ 4ರಿಂದ ರಾತ್ರಿ 10ರವರೆಗೆ ನಿರ್ಬಂಧವಿರಲಿದೆ.

ಪೀಣ್ಯ ಎಲಿವೇಟೆಡ್ ಕಾರಿಡಾರ್‌ನಲ್ಲಿ ಆಟೋರಿಕ್ಷಾ ಮತ್ತು ಗೂಡ್ಸ್ ಆಟೋಗಳಿಗೆ ದಿನದ 24 ಗಂಟೆಯೂ ಪ್ರವೇಶ ನಿರ್ಬಂಧಿಸಲಾಗಿದೆ. ಭಾರಿ ಹಾಗೂ ಮಧ್ಯಮ ಸರಕು ವಾಹನಗಳಿಗೆ ಬೆಳಗ್ಗೆ 7ರಿಂದ 11 ಮತ್ತು ಸಂಜೆ 4ರಿಂದ ರಾತ್ರಿ 10ರವರೆಗೆ ಸಂಚಾರಕ್ಕೆ ಅವಕಾಶ ಇರುವುದಿಲ್ಲ.

ಸಿಲ್ಕ್ ಬೋರ್ಡ್‌ನಿಂದ ರಾಗಿಗುಡ್ಡದವರೆಗಿನ ಡಬಲ್ ಡೆಕ್ಕರ್ ಫ್ಲೈಓವರ್‌ನಲ್ಲಿ ಭಾರಿ ಸರಕು ವಾಹನಗಳ



ಸಂಚಾರವನ್ನು 24 ಗಂಟೆಯೂ ನಿಷೇಧಿಸಲಾಗಿದೆ. ಸಂಜೀವನಗರ ಕ್ರಾಸ್‌ನಿಂದ ವಿದ್ಯಾಶಿಲ್ಪ ಜಂಕ್ಷನ್‌ವರೆಗಿನ ವಿಮಾನ ನಿಲ್ದಾಣ ರಸ್ತೆಯ ಎಲಿವೇಟೆಡ್ ಕಾರಿಡಾರ್‌ನಲ್ಲಿ ದ್ವಿಚಕ್ರ ವಾಹನ ಹಾಗೂ ಆಟೋರಿಕ್ಷಾಗಳಿಗೆ 24 ಗಂಟೆಯೂ ನಿರ್ಬಂಧವಿದ್ದು, ಸರಕು ವಾಹನಗಳಿಗೆ ಬೆಳಗ್ಗೆ 6ರಿಂದ ರಾತ್ರಿ 10ರವರೆಗೆ ನಿಷೇಧವಿರಲಿದೆ.

ಎಲೆಕ್ಟ್ರಾನಿಕ್ ಸಿಟಿ ಎಲಿವೇಟೆಡ್ ಕಾರಿಡಾರ್‌ನಲ್ಲಿ ದ್ವಿಚಕ್ರ ವಾಹನ, ಪ್ರಯಾಣಿಕರ ಆಟೋ ಹಾಗೂ ಗೂಡ್ಸ್ ಆಟೋಗಳ ಸಂಚಾರಕ್ಕೆ 24 ಗಂಟೆಯೂ ನಿರ್ಬಂಧ ವಿಧಿಸಲಾಗಿದೆ. ಸರಕು ಸಾಗಣೆ ವಾಹನಗಳಿಗೆ ಬೆಳಗ್ಗೆ 6ರಿಂದ ರಾತ್ರಿ 10ರವರೆಗೆ ನಿಷೇಧವಿದ್ದು, ಈ ನಿಯಮ ಸೆ.11ರಿಂದ ಜಾರಿಗೆ ಬರಲಿದೆ.

**19 ತಿಂಗಳಲ್ಲಿ 41 ಸಾವು**

ಸಂಚಾರ ಪೊಲೀಸ್ ಇಲಾಖೆಯ ಪ್ರಕಾರ, ಕಳೆದ 19 ತಿಂಗಳಲ್ಲಿ ಎಲೆಕ್ಟ್ರಾನಿಕ್ ಸಿಟಿ ಹಾಗೂ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಎಲಿವೇಟೆಡ್ ಕಾರಿಡಾರ್‌ಗಳಲ್ಲಿ ಸಂಭವಿಸಿದ ಅಪಘಾತಗಳಲ್ಲಿ 41 ಮಂದಿ ಮೃತಪಟ್ಟಿದ್ದಾರೆ. ಮೃತರಲ್ಲಿ ದ್ವಿಚಕ್ರ ವಾಹನ ಸವಾರರ ಸಂಖ್ಯೆ ಹೆಚ್ಚಾಗಿದೆ. ಅಲ್ಲದೆ, ಎಲಿವೇಟೆಡ್ ರಸ್ತೆಯಲ್ಲಿ ಭಾರಿ ವಾಹನಗಳು ಕೆಟ್ಟು ನಿಲ್ಲುವುದರಿಂದ ಸಂಚಾರ ದಟ್ಟಣೆ ಉಂಟಾಗಿ ತುರ್ತು ಸೇವಾ ವಾಹನಗಳ ಸಂಚಾರಕ್ಕೂ ಅಡಚಣೆಯಾಗುತ್ತಿತ್ತು.

ರಸ್ತೆಗಳ ವಿನ್ಯಾಸ, ಮಾರ್ಗದ ಅಗಲ ಹಾಗೂ ಅಪಘಾತಗಳ ತೀವ್ರತೆಯನ್ನು ಪರಿಶೀಲಿಸಿದ ಬಳಿಕ ಈ ಕ್ರಮ ಕೈಗೊಳ್ಳಲಾಗಿದೆ. ಸದ್ಯ ನಿಯಮಗಳನ್ನು ಪ್ರಾಯೋಗಿಕವಾಗಿ ಜಾರಿಗೊಳಿಸಲಾಗುತ್ತಿದ್ದು, ಇದರ ಪರಿಣಾಮವನ್ನು ಅಧ್ಯಯನ ಮಾಡಿದ ಬಳಿಕ ಶಾಶ್ವತ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸಂಚಾರ ಪೊಲೀಸ್ ಇಲಾಖೆಯ ಜಂಟಿ ಆಯುಕ್ತ ಕಾರ್ತಿಕ್ ರೆಡ್ಡಿ ತಿಳಿಸಿದ್ದಾರೆ.

ನಿರ್ಬಂಧಿತ ಮಾರ್ಗಗಳಲ್ಲಿ ಸಂಚಾರ ನಡೆಸುವ ವಾಹನಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಹೊಸ ನಿರ್ಬಂಧಗಳಿಂದ ಫ್ಲೈಓವರ್‌ಗಳನ್ನು ಅವಲಂಬಿಸುವ ದ್ವಿಚಕ್ರ ವಾಹನ ಸವಾರರು ಮತ್ತು ಆಟೋ ಪ್ರಯಾಣಿಕರಿಗೆ ಪರ್ಯಾಯ ಮಾರ್ಗ ಬಳಸಬೇಕಾದ ಅನಿವಾರ್ಯತೆ ಎದುರಾಗಲಿದೆ. ರಸ್ತೆ ಸುರಕ್ಷತೆಯ ದೃಷ್ಟಿಯಿಂದ ಸಾರ್ವಜನಿಕರು ನಿಯಮ ಪಾಲಿಸಿ ಸಹಕರಿಸುವಂತೆ ಸಂಚಾರ ಪೊಲೀಸರು ಮನವಿ ಮಾಡಿದ್ದಾರೆ. 2ನೇ ಪುಟಕ್ಕೆ...

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

### ಸವಿ ವಾಹಿನಿ

**ಸತ್ಯ ಒಳ್ಳೆಯದು, ಸತ್ಯದ ಜೀವನ ಅದಕ್ಕಿಂತಲೂ ಒಳ್ಳೆಯದು.. ನದಿಗಳು ಮುಂದಕ್ಕೆ ಸಾಗುವವೇ ಹೊರತು ಹಿಂದೆ ಹರಿಯುವುದಿಲ್ಲ.. ಅದೇ ರೀತಿ ನಮ್ಮ ಜೀವನವೂ ಕೂಡಾ.. ಕಳೆದು ಹೋದ ಬದುಕಿನ ಬಗ್ಗೆ ಚಿಂತಿಸದೆ ಮುಂದೆ ಸಾಗಬೇಕು...!!**

### ದಿನ ಪಂಚಾಂಗ

**ಸೆಪ್ಟಂಬರ್, 05-2026, ಶನಿವಾರ ವರ್ಷ ಋತು, ಶ್ರಾವಣ ಮಾಸ, ಬಹುಳ ಪಕ್ಷ. ನವಮಿ ತಿಥಿ ರಾ-09:16
ಮೃಗಶಿರ ನಕ್ಷತ್ರ ರಾ-10:00
ರಾಹುಕಾಲ ಬೆ-09:12-10:45
ಶಿಕ್ಷಕರ ದಿನ, ತೋಳಪ್ಪರ್ ಕೃಷ್ಣ ಜಯಂತಿ, ಶ್ರಾವಣ ಶನಿವಾರ, ರಾಣೆಬೆನ್ನೂರು । ಹುಲಿಕಟ್ಟಿ ಬೀರಲಿಂಗೇಶ್ವರ ಪೂಜೆ, ಸುರಪುರ ಸ್ತಂಭಾರೋಪಣ**

### ಆರೋಗ್ಯ

## ಪುದೀನಾ-ದಾಲ್ಚಿನ್ನಿ ಕಷಾಯ ಶುಗರ್ ನಿಯಂತ್ರಣಕ್ಕೆ ಸಹಾಯವೇ?

ರಕ್ತದಲ್ಲಿನ ಸಕ್ಕರೆ ಪ್ರಮಾಣವನ್ನು ನಿಯಂತ್ರಿಸಲು ಪುದೀನಾ ಹಾಗೂ ದಾಲ್ಚಿನ್ನಿಯಿಂದ ತಯಾರಿಸುವ ಕಷಾಯ ಸಹಾಯಕವಾಗುತ್ತದೆ ಎಂಬ ಮಾತುಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಆದರೆ ಈ ಕಷಾಯ ಮಧುಮೇಹವನ್ನು ಸಂಪೂರ್ಣ ನಿಯಂತ್ರಿಸುತ್ತದೆ ಅಥವಾ ವೈದ್ಯರು ಸೂಚಿಸಿರುವ ಔಷಧಿಗೆ ಪರ್ಯಾಯವಾಗಿದೆ ಎಂಬುದಕ್ಕೆ ಸಾಕಷ್ಟು ವೈಜ್ಞಾನಿಕ ಪುರಾವೆಗಳಿಲ್ಲ.

ಒಂದು ಕಪ್ ನೀರಿಗೆ ಸ್ವಚ್ಛಗೊಳಿಸಿದ ಕೆಲವು ಪುದೀನಾ ಎಲೆಗಳು ಹಾಗೂ ಸಣ್ಣ ತುಂಡು ದಾಲ್ಚಿನ್ನಿ ಹಾಕಿ 5-10 ನಿಮಿಷ ಕುದಿಸಿ, ನಂತರ ಸೋಸಿ ಬೆಚ್ಚಗಿರುವಾಗ ಸೇವಿಸಬಹುದು. ಮಧುಮೇಹ ಇರುವವರು ಇದಕ್ಕೆ ಸಕ್ಕರೆ ಅಥವಾ ಜೇನುತುಪ್ಪ ಸೇರಿಸದಿರುವುದು ಸೂಕ್ತ.

ಪುದೀನಾ ಜೀರ್ಣಕ್ರಿಯೆಗೆ ಆರಾಮ ನೀಡುವುದರ ಜೊತೆಗೆ ದೇಹಕ್ಕೆ ದ್ರವಾಂಶ ಒದಗಿಸುತ್ತದೆ. ದಾಲ್ಚಿನ್ನಿಯಲ್ಲಿರುವ ಕೆಲವು ಸಸ್ಯ ಸಂಯುಕ್ತಗಳು ರಕ್ತದಲ್ಲಿನ ಗ್ಲೂಕೋಸ್ ನಿಯಂತ್ರಣದ ಮೇಲೆ ಪರಿಣಾಮ ಬೀರಬಹುದು ಎಂಬ ಅಧ್ಯಯನಗಳಿವೆ. ಆದರೆ ಪುದೀನಾ-ದಾಲ್ಚಿನ್ನಿ ಕಷಾಯ ಸೇವನೆಯಿಂದಲೇ ಮಧುಮೇಹ ನಿಯಂತ್ರಣಕ್ಕೆ ಬರುತ್ತದೆ ಎಂದು ಖಚಿತವಾಗಿ ಹೇಳಲು ಸಾಧ್ಯವಿಲ್ಲ.



ಮಧುಮೇಹದ ಔಷಧಿ ಅಥವಾ ಇನ್ಸುಲಿನ್ ಬಳಸುತ್ತಿರುವವರು ಇಂತಹ ಕಷಾಯವನ್ನು ನಿಯಮಿತವಾಗಿ ಸೇವಿಸುವ ಮೊದಲು ವೈದ್ಯರ ಸಲಹೆ ಪಡೆಯುವುದು ಉತ್ತಮ. ರಕ್ತದಲ್ಲಿನ ಸಕ್ಕರೆ ಕಡಿಮೆಯಾಗುವ ಅಪಾಯ ಇರುವವರು ವಿಶೇಷ ಎಚ್ಚರಿಕೆ ವಹಿಸಬೇಕು. ದಾಲ್ಚಿನ್ನಿಯನ್ನು ಅತಿಯಾಗಿ ಸೇವಿಸುವುದೂ ಸೂಕ್ತವಲ್ಲ.

ಮಧುಮೇಹ ನಿಯಂತ್ರಣಕ್ಕೆ ಸಮತೋಲಿತ ಆಹಾರ, ನಿಯಮಿತ ವ್ಯಾಯಾಮ, ರಕ್ತದಲ್ಲಿನ ಸಕ್ಕರೆಯ ಮೇಲ್ವಿಚಾರಣೆ ಹಾಗೂ ವೈದ್ಯರು ಸೂಚಿಸಿರುವ ಔಷಧಿಗಳನ್ನು ಸರಿಯಾಗಿ ಸೇವಿಸುವುದೇ ಪ್ರಮುಖ. ಮನೆಮದ್ದುಗಳನ್ನು ಹೆಚ್ಚುವರಿ ಆಹಾರ ಪದ್ಧತಿಯಂತೆ ಮಾತ್ರ ಪರಿಗಣಿಸಬೇಕು; ವೈದ್ಯಕೀಯ ಚಿಕಿತ್ಸೆಯನ್ನು ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸಬಾರದು.

ಮಧುಮೇಹ ಇರುವವರು ಯಾವುದೇ ಮನೆಮದ್ದನ್ನು ಸೇವಿಸಿದ ಬಳಿಕ ತಮ್ಮ ರಕ್ತದಲ್ಲಿನ ಸಕ್ಕರೆ ಮಟ್ಟದಲ್ಲಿ ಬದಲಾವಣೆ ಕಂಡುಬರುತ್ತಿದೆಯೇ ಎಂಬುದನ್ನು ಗಮನಿಸುವುದು ಮುಖ್ಯ. ವಿಶೇಷವಾಗಿ ಹೊಸ ಆಹಾರ ಅಥವಾ ಪಾನೀಯವನ್ನು ನಿಯಮಿತವಾಗಿ ಸೇವಿಸಲು ಆರಂಭಿಸುವ ಮೊದಲು ವೈದ್ಯರು ಅಥವಾ ಆಹಾರ ತಜ್ಞರ ಸಲಹೆ ಪಡೆಯುವುದು ಸುರಕ್ಷಿತ ಕ್ರಮವಾಗಿದೆ.

ಕಷಾಯ ಸೇವಿಸುವುದಕ್ಕಿಂತ ಅದರೊಂದಿಗೆ ಆರೋಗ್ಯಕರ ಜೀವನಶೈಲಿಗೆ ಆದ್ಯತೆ ನೀಡುವುದು ಹೆಚ್ಚು ಪರಿಣಾಮಕಾರಿ. ಕಡಿಮೆ ಸಕ್ಕರೆ ಮತ್ತು ಸಮತೋಲಿತ ಆಹಾರ, ತೂಕ ನಿಯಂತ್ರಣ, ನಿಯಮಿತ ದೈಹಿಕ ಚಟುವಟಿಕೆ ಹಾಗೂ ಸಮಯಕ್ಕೆ ಸರಿಯಾಗಿ ವೈದ್ಯಕೀಯ ತಪಾಸಣೆ ಮಾಡಿಸಿಕೊಳ್ಳುವುದು ರಕ್ತದಲ್ಲಿನ ಸಕ್ಕರೆಯನ್ನು ನಿರ್ವಹಿಸಲು ಪ್ರಮುಖ ಪಾತ್ರ ವಹಿಸುತ್ತದೆ.

# ‘ಬರ ಘೋಷಣೆ: 15 ದಿನಗಳಲ್ಲಿ ಮತ್ತಷ್ಟು ತಾಲೂಕುಗಳು ಪಟ್ಟಿಗೆ’

● ವಿಕ್ರಮ ವಾಹಿನಿ । ಕೂಡಲಸಂಗಮ

ರಾಜ್ಯದಲ್ಲಿ ಈಗಾಗಲೇ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಮುಂದಿನ 15 ದಿನಗಳಲ್ಲಿ ವೈಜ್ಞಾನಿಕ ಪರಿಶೀಲನೆ ಹಾಗೂ ಅಧಿಕಾರಿಗಳ ವರದಿ ಆಧರಿಸಿ ಮತ್ತಷ್ಟು ತಾಲೂಕುಗಳನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಕೂಡಲಸಂಗಮದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಶೇ.42-43ರಷ್ಟು ಮಳೆ ಕೊರತೆಯಾಗಿದ್ದು, ಹಲವು ಜಿಲ್ಲೆಗಳಲ್ಲಿ ಬೆಳೆಗಳು ಹಾನಿಗೊಳಗಾಗಿವೆ. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಅಧಿಕಾರಿಗಳ ವರದಿಗಳನ್ನು ಕೇಂದ್ರದ ಮಾರ್ಗಸೂಚಿಯಂತೆ ಪರಿಶೀಲಿಸಿ ಹಂತ ಹಂತವಾಗಿ ಬರಪೀಡಿತ ತಾಲೂಕುಗಳ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದರು.

ರೈತರ ಹಿತ ಸರ್ಕಾರದ ಪ್ರಮುಖ ಆದ್ಯತೆಯಾಗಿದ್ದು, ಕೃಷಿ ಸಂಕಷ್ಟ ನಿವಾರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಕೃಷ್ಣಾ ನದಿಗೆ ನೀರು ಬಂದಿದ್ದರೂ ಕಾವೇರಿ ಸೇರಿದಂತೆ ಹಲವು ಭಾಗಗಳಲ್ಲಿ ನೀರಿನ ಕೊರತೆ ಇದೆ. ತಮಿಳುನಾಡಿಗೆ ನೀರು ಬಿಡುವ ವಿಚಾರದಲ್ಲೂ ರೈತರ ಹಿತವನ್ನು ಗಮನದಲ್ಲಿಟ್ಟುಕೊಂಡು ಸೂಕ್ತ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು.

**ಕಸ್ತೂರಿರಂಗನ್ ವರದಿ ಕುರಿತು ಸರ್ವಪಕ್ಷ ಸಭೆ**

ಕಸ್ತೂರಿರಂಗನ್ ವರದಿ ಕುರಿತು ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಿ ರಾಜ್ಯದ ಅಭಿಪ್ರಾಯ ಸಲ್ಲಿಸಲು 60 ದಿನಗಳ ಕಾಲಾವಕಾಶ ನೀಡಿರುವ ಹಿನ್ನೆಲೆಯಲ್ಲಿ ಎಲ್ಲ ಪಕ್ಷಗಳ ಅಭಿಪ್ರಾಯ ಪಡೆದು ರಾಜ್ಯದ ನಿಲುವು ರೂಪಿಸಲಾಗುವುದು. ರಾಜ್ಯದ ಹಿತದೃಷ್ಟಿಯಿಂದ ಬಿಜೆಪಿ ಸೇರಿದಂತೆ ಎಲ್ಲ ಪಕ್ಷಗಳ ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಚರ್ಚೆ ನಡೆಸಲಾಗುವುದು ಎಂದು ಶಿವಕುಮಾರ್ ಹೇಳಿದರು.

**ಮನೆ ಬಾಗಿಲಿಗೆ ಸರ್ಕಾರ**

ಜನರ ಸಮಸ್ಯೆಗಳನ್ನು ಸ್ಥಳದಲ್ಲೇ ಆಲಿಸಿ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಶನಿವಾರದಿಂದ 'ಪ್ರಜಾಸೇವಾ' ಅಭಿಯಾನ ಆರಂಭಿಸಲಾಗುವುದು.

ಪ್ರತಿ ತಿಂಗಳ ಮೊದಲ ಹಾಗೂ ಮೂರನೇ ಶನಿವಾರ ಸಚಿವರು ತಾಲೂಕುಗಳಿಗೆ ತೆರಳಿ ಜನರ ಅಹವಾಲು ಸ್ವೀಕರಿಸಲಿದ್ದಾರೆ. ಶಾಸಕರು ಪಂಚಾಯಿತಿ ಮಟ್ಟದಲ್ಲೂ ಜನರನ್ನು ಭೇಟಿ ಮಾಡಿ ಸಮಸ್ಯೆಗಳನ್ನು ಆಲಿಸುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಬಿಜೆಪಿಯವರು ಇನ್ನೂ ನಾಲ್ಕು ಯಾತ್ರೆ ಮಾಡಲಿ, ಪಶ್ಚಾತ್ತಾಪ ಯಾತ್ರೆಯನ್ನೂ ಮಾಡಲಿ. ಜನರು ಅವರಿಗೆ ಈಗಾಗಲೇ ತೀರ್ಪು ನೀಡಿದ್ದಾರೆ ಎಂದು ಬಿಜೆಪಿ ಪಾದಯಾತ್ರೆ ಕುರಿತು ವ್ಯಂಗ್ಯವಾಡಿದರು.

ಉದ್ಯಾನವನಗಳ ಸಂರಕ್ಷಣೆ ತಿದ್ದುಪಡಿ ವಿಧೇಯಕ ಹಿಂಪಡೆದಿರುವ ಕುರಿತು ಮಾತನಾಡಿದ ಅವರು, ಸಾರ್ವಜನಿಕರ ಅಭಿಪ್ರಾಯ ಹಾಗೂ ಹಿತವೇ ಸರ್ಕಾರಕ್ಕೆ ಮುಖ್ಯ. ಅಗತ್ಯವಿದ್ದರೆ ಸಮಿತಿ ರಚಿಸಿ ಚರ್ಚೆ ನಡೆಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು. 'ಯು-ಟರ್ನ್' ಎಂದು ಟೀಕಿಸುವ ವಿರೋಧ ಪಕ್ಷಗಳಿಗೆ ಜನರ ಅಭಿಪ್ರಾಯಕ್ಕೆ ಅನುಗುಣವಾಗಿ ನಿರ್ಧಾರ ಕೈಗೊಳ್ಳುವ ಶಕ್ತಿ ಜನರೇ ನೀಡಿದ್ದಾರೆ ಎಂದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಬಾಗಲಕೋಟೆಯ ಹುನಗುಂದದಲ್ಲಿ ರೈತ ನಂದೆಪ್ಪ ಸಂಗಪ್ಪ ಬಾರಕೇರ ಹಾಗೂ ಹನುಮಂತ ಸಂಗಪ್ಪ ಹುನಗುಂದ ಅವರ ಜಮೀನಿಗೆ ಶುಕ್ರವಾರ ಭೇಟಿ ನೀಡಿ ಈರುಳ್ಳಿ, ಮೆಣಸಿನಕಾಯಿ ಮತ್ತು ಸೂರ್ಯಕಾಂತಿ ಬೆಳೆ ವೀಕ್ಷಣೆ ಮಾಡಿ ಬರ ಪರಿಣಾಮದ ಬಗ್ಗೆ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಉಪಸಭಾಧ್ಯಕ್ಷ ಮಂಕಾಳ್ ವೈದ್ಯ, ಸಚಿವ ವಿಜಯಾನಂದ ಕಾಶಾಪ್ಪನವರ್, ಸಂಸದ ಜಿಸಿ ಚಂದ್ರಶೇಖರ್, ಶಾಸಕರಾದ ಉಮೇಶ್ ಮೇಟಿ, ಭೀಮಸೇನ ಚಿಮ್ಮನಕಟ್ಟಿ, ಆರ್ ಬಿ ತಿಮ್ಮಾಪುರ, ಜೆ ಟಿ ಪಾಟೀಲ, ವೀಣಾ ಕಾಶಪ್ಪನವರ್, ಜಿಲ್ಲಾಧಿಕಾರಿ ಸಂಗಪ್ಪ, ಮತ್ತಿತರರು ಇದ್ದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಬಾಗಲಕೋಟೆ, ವಿಜಯನಗರ, ಬಳ್ಳಾರಿ ಜಿಲ್ಲೆಯ ಬರಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆಯನ್ನು ಶುಕ್ರವಾರ ನಡೆಸಿದರು. ವಿಧಾನಸಭೆ ಉಪಾಸಭಾಧ್ಯಕ್ಷ ಮಾಂಕಾಳ ವೈದ್ಯ, ಸಂಸದ ಡಾ ಜಿ ಸಿ ಚಂದ್ರಶೇಖರ್ ಜತೆಗಿದ್ದರು.

## ಬೆಂಗಳೂರು ಪ್ರಮುಖ ಫ್ಲೈಓವರ್‌ಗಳ ಮೇಲೆ ಸಂಚಾರ ನಿಷೇಧ

1ನೇ ಪುಟದಿಂದ

ನಿರ್ಬಂಧ ಜಾರಿಯಾದ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಮಾರ್ಗಗಳಲ್ಲಿ ಸಂಚಾರದ ಒತ್ತಡ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಪರ್ಯಾಯ ರಸ್ತೆಗಳಲ್ಲಿ ಅಗತ್ಯ ಸಂಚಾರ ವ್ಯವಸ್ಥೆ ಕಲ್ಪಿಸಲು ಪೊಲೀಸರು ಕ್ರಮ ಕೈಗೊಳ್ಳಲಿದ್ದಾರೆ. ಪ್ರಮುಖ ಜಂಕ್ಷನ್‌ಗಳು ಹಾಗೂ ಸಂಪರ್ಕ ರಸ್ತೆಗಳಲ್ಲೂ ವಾಹನಗಳ ಸುಗಮ ಸಂಚಾರಕ್ಕೆ ಸಿಬ್ಬಂದಿಯನ್ನು ನಿಯೋಜಿಸುವ ಸಾಧ್ಯತೆ ಇದೆ.

ವಿಶೇಷವಾಗಿ ಕಚೇರಿ ಸಮಯ ಹಾಗೂ ಗರಿಷ್ಠ ಸಂಚಾರದ ಅವಧಿಯಲ್ಲಿ ಪರ್ಯಾಯ ಮಾರ್ಗಗಳಲ್ಲಿ ವಾಹನ ದಟ್ಟಣೆ ಉಂಟಾಗದಂತೆ ಸಂಚಾರ ಪೊಲೀಸರು ಪರಿಸ್ಥಿತಿಯನ್ನು ನಿರಂತರವಾಗಿ ಗಮನಿಸಲಿದ್ದಾರೆ. ಅಗತ್ಯವಿದ್ದಲ್ಲಿ ಸಿಗ್ನಲ್‌ಗಳ ಸಮಯದಲ್ಲಿ ಬದಲಾವಣೆ ಹಾಗೂ ಹೆಚ್ಚುವರಿ ಸಂಚಾರ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗುವುದು.

## ‘ಬಸವರಾಜ ಕನ್ನಾಳೆ ಭಾಲ್ಕಿಯ ಬಿಜೆಪಿ ಕಾರ್ಯಕರ್ತ’

● ವಿಕ್ರಮ ವಾಹಿನಿ । ಬೆಂಗಳೂರು

ಕೆಪಿಎಸ್‌ಸಿ ನೇಮಕಾತಿ ಹಗರಣದಲ್ಲಿ ಬಂಧಿತರಾಗಿರುವ ಬಸವರಾಜ ಕನ್ನಾಳೆ ಅವರು ಭಾಲ್ಕಿ ಕ್ಷೇತ್ರದ ಬಿಜೆಪಿ ಕಾರ್ಯಕರ್ತರಾಗಿದ್ದು, ತಮ್ಮ ವಿರುದ್ಧವೇ ಬಿಜೆಪಿಯಿಂದ ಸ್ಪರ್ಧಿಸಲು ತಯಾರಿ ನಡೆಸಿದ್ದರು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಬೆಂಗಳೂರಿನಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಲವು ತಿಂಗಳ ಹಿಂದೆ ಕನ್ನಾಳೆ ತಮ್ಮ ಕಚೇರಿಗೆ ಆಗಮಿಸಿ, ಬಿಜೆಪಿ ನಾಯಕರ ಶಿಫಾರಸಿನ ಮೇರೆಗೆ ರಾಜ್ಯಪಾಲರು ತಮ್ಮನ್ನು ತುಮಕೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಿದ್ದಾರೆ ಎಂದು ಹೇಳಿ ಆಶೀರ್ವಾದ ಕೋರಿದ್ದರು.

ಈ ವೇಳೆ ಶುಭಕೋರಿದ್ದು, ಸಿಹಿ ತಿನ್ನಿಸಿದ ಸಂದರ್ಭದ ಫೋಟೋವನ್ನು ಮುಂದಿಟ್ಟುಕೊಂಡು ರಾಜಕೀಯ ಮಾಡುವುದು ಸರಿಯಲ್ಲ ಎಂದರು.

ಕನ್ನಾಳೆ ತಮ್ಮ ವಿರುದ್ಧ ಭಾಲ್ಕಿಯಿಂದ ಬಿಜೆಪಿ ಟಿಕೆಟ್ ಪಡೆದು ಸ್ಪರ್ಧಿಸುವುದಾಗಿ ಹೇಳಿದ್ದರು. ಪ್ರಜಾಪ್ರಭುತ್ವದಲ್ಲಿ ಎಲ್ಲರಿಗೂ ಚುನಾವಣೆಯಲ್ಲಿ ಸ್ಪರ್ಧಿಸುವ ಹಕ್ಕಿದ್ದು, ಪ್ರಯತ್ನಿಸುವಂತೆ ತಾವು ಹೇಳಿದ್ದಾಗಿ ಖಂಡ್ರೆ ಸ್ಪಷ್ಟಪಡಿಸಿದರು.

ಕನ್ನಾಳೆ ಹಲವು ಬಿಜೆಪಿ ಹಾಗೂ ಜೆಡಿಎಸ್ ನಾಯಕರೊಂದಿಗೆ ಕಾಣಿಸಿಕೊಂಡಿರುವ ಛಾಯಾಚಿತ್ರಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಹೀಗಿರುವಾಗ ತಮ್ಮೊಂದಿಗಿನ ಒಂದು ಫೋಟೋವನ್ನು ಮಾತ್ರ ಮುಂದಿಟ್ಟುಕೊಂಡು ಕಾಂಗ್ರೆಸ್ ವಿರುದ್ಧ ಆರೋಪ ಮಾಡುವುದು ಸರಿಯಲ್ಲ ಎಂದು ಹೇಳಿದರು.



ಕನ್ನಾಳೆಯನ್ನು ತುಮಕೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರನ್ನಾಗಿ ಮಾಡಲು ಯಾವ ಬಿಜೆಪಿ ನಾಯಕರು ಶಿಫಾರಸು ಮಾಡಿದ್ದರು ಮತ್ತು ಯಾವ ಮಾನದಂಡದ ಆಧಾರದ ಮೇಲೆ ನೇಮಕ ಮಾಡಲಾಗಿದೆ ಎಂಬುದನ್ನು ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಬಿಜೆಪಿ-ಜೆಡಿಎಸ್ ಮೈತ್ರಿಕೂಟದವರು ತಮ್ಮ ಮೇಲಿನ ಆರೋಪಗಳನ್ನು ಕಾಂಗ್ರೆಸ್ ಮೇಲೆ ಹೊರಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಖಂಡ್ರೆ ಟೀಕಿಸಿದರು.

ಕೆಪಿಎಸ್‌ಸಿ ನೇಮಕಾತಿ ಹಗರಣದ ಎಲ್ಲ ಆಯಾಮಗಳ ಬಗ್ಗೆಯೂ ಸರ್ಕಾರ ಸಮಗ್ರ ಹಾಗೂ ಪಾರದರ್ಶಕ ತನಿಖೆ ನಡೆಸುತ್ತಿದೆ. ಪ್ರಕರಣದಲ್ಲಿ ಭಾಗಿಯಾಗಿರುವ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. ತನಿಖೆ ಪೂರ್ಣಗೊಂಡ ಬಳಿಕ ಯಾರು ತಪ್ಪಿತಸ್ಥರು ಎಂಬುದು ಬಹಿರಂಗವಾಗಲಿದ್ದು, ಜನರಿಗೆ ವಾಸ್ತವಾಂಶ ತಿಳಿಯಲಿದೆ ಎಂದು ಅವರು ಹೇಳಿದರು.

# ಯುವ ದಸರಾ ಉದ್ಘಾಟನೆಗೆ ಪ್ರಭುದೇವಗೆ ಆಹ್ವಾನ

● ವಿಕ್ರಮ ವಾಹಿನಿ । ಮೈಸೂರು

ವಿಶ್ವವಿಖ್ಯಾತ ಮೈಸೂರು ದಸರಾ-2026ರ ಸಿದ್ಧತೆಗಳು ಭರದಿಂದ ಸಾಗುತ್ತಿದ್ದು, ದಸರಾದ ಪ್ರಮುಖ ಆಕರ್ಷಣೆಯಾಗಿರುವ ಯುವ ದಸರಾ ಕಾರ್ಯಕ್ರಮಕ್ಕೆ ಖ್ಯಾತ ನಟ ಹಾಗೂ ನೃತ್ಯ ನಿರ್ದೇಶಕ ಪ್ರಭುದೇವ ಅವರನ್ನು ಉದ್ಘಾಟನೆಗೆ ಆಹ್ವಾನಿಸಲಾಗಿದೆ.

ಯುವ ದಸರಾ ಸಮಿತಿಯ ಕಾರ್ಯಾಧ್ಯಕ್ಷ ಜಿ. ಸೋಮಶೇಖರ್ ಹಾಗೂ ಕಾರ್ಯದರ್ಶಿಗಳಾದ ಅರುಣ್ ಮತ್ತು ಸತ್ಯಮೂರ್ತಿ ಅವರು ಚೆನ್ನೈನಲ್ಲಿರುವ ಪ್ರಭುದೇವ ಅವರ ನಿವಾಸಕ್ಕೆ ತೆರಳಿ ಅಧಿಕೃತವಾಗಿ ಆಹ್ವಾನ ನೀಡಿದರು. ಮೈಸೂರು ಸಂಸ್ಥಾನದ ಪರಂಪರೆಯನ್ನು ಬಿಂಬಿಸುವ ಪೇಟ, ರೇಷ್ಮೆ ಶಾಲು ಹಾಗೂ ಹೂಮಾಲೆ ಹಾಕಿ ಗೌರವ ಸಲ್ಲಿಸಿ ಆಹ್ವಾನಿಸಲಾಯಿತು.



ಆಹ್ವಾನವನ್ನು ಸಂತೋಷದಿಂದ ಸ್ವೀಕರಿಸಿದ ಪ್ರಭುದೇವ ಅವರು ಯುವ ದಸರಾ ಕಾರ್ಯಕ್ರಮದಲ್ಲಿ ಭಾಗವಹಿಸಲು ಒಪ್ಪಿಗೆ ಸೂಚಿಸಿದ್ದಾರೆ. ಮೈಸೂರಿನವರೇ ಆದ ಪ್ರಭುದೇವ ಅವರ ಉಪಸ್ಥಿತಿಯಿಂದ ಯುವ ದಸರಾ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ದೊರೆಯಲಿದೆ ಎಂದು ಜಿಲ್ಲಾಡಳಿತ ನಿರೀಕ್ಷಿಸಿದೆ.

ಭಾರತೀಯ ಚಿತ್ರರಂಗದಲ್ಲಿ ನಟ, ನೃತ್ಯ ನಿರ್ದೇಶಕ ಹಾಗೂ ನಿರ್ದೇಶಕರಾಗಿ ವಿಶಿಷ್ಟ ಛಾಪು ಮೂಡಿಸಿರುವ ಪ್ರಭುದೇವ ಅವರ ನೃತ್ಯ ಶೈಲಿ ಯುವಜನರಲ್ಲಿ ಅಪಾರ ಜನಪ್ರಿಯತೆ ಗಳಿಸಿದೆ. ದೇಶದ ವಿವಿಧ ಭಾಗಗಳ ಸಂಗೀತಗಾರರು, ನೃತ್ಯಪಟುಗಳು ಹಾಗೂ ಯುವ ಕಲಾವಿದರು ಭಾಗವಹಿಸುವ ಯುವ ದಸರಾ ವೇದಿಕೆಯಲ್ಲಿ ಅವರ ಉಪಸ್ಥಿತಿ ವಿಶೇಷ ಆಕರ್ಷಣೆಯಾಗುವ ನಿರೀಕ್ಷೆಯಿದೆ.

2026ರ ಮೈಸೂರು ದಸರಾ ಮಹೋತ್ಸವ ಅ.11ರಿಂದ 21ರವರೆಗೆ ನಡೆಯಲಿದ್ದು, ಅ.11ರಂದು ದಸರಾ ಉದ್ಘಾಟನೆ ನೆರವೇರಲಿದೆ. ಯುವ ದಸರಾ ಕಾರ್ಯಕ್ರಮದ ನಿಖರ ದಿನಾಂಕ, ವೇದಿಕೆ ಹಾಗೂ ಸಂಪೂರ್ಣ ವೇಳಾಪಟ್ಟಿಯನ್ನು ಜಿಲ್ಲಾಡಳಿತ ಪ್ರತ್ಯೇಕವಾಗಿ ಪ್ರಕಟಿಸಬೇಕಿದೆ.

ಪ್ರಭುದೇವ ಅವರ ತಂದೆ ಖ್ಯಾತ ನೃತ್ಯ ಸಂಯೋಜಕ ಮುಗೂರು ಸುಂದರ್. ಅವರ ಕುಟುಂಬಕ್ಕೆ ಮೈಸೂರು ಜಿಲ್ಲೆಯೊಂದಿಗೆ ನಿಕಟ ನಂಟಿದೆ. ನಂಜನಗೂಡು ತಾಲೂಕಿನ ಕೆಂಬಾಳು ಗ್ರಾಮದ ಮಲೆ ಮಹದೇಶ್ವರ ದೇವಸ್ಥಾನವನ್ನು ತಾಯಿಯ ಆಶಯದಂತೆ ಪ್ರಭುದೇವ ಅವರು ಸುಮಾರು 25 ಲಕ್ಷ ವೆಚ್ಚದಲ್ಲಿ ಜೀರ್ಣೋದ್ಧಾರ ಮಾಡಿಸಿದ್ದಾರೆ. ಕುಟುಂಬದೊಂದಿಗೆ ಇಲ್ಲಿಗೆ ಭೇಟಿ ನೀಡಿ ಪೂಜಾ ಕಾರ್ಯಕ್ರಮಗಳಲ್ಲೂ ಭಾಗವಹಿಸುತ್ತಾರೆ. ಮೈಸೂರು ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಸ್ವಂತ ಆಸ್ತಿ ಹಾಗೂ ಕೃಷಿ ಭೂಮಿಯನ್ನೂ ಹೊಂದಿದ್ದಾರೆ.

## ‘ತಾಯಿಯಂತೆ ಪ್ರಕೃತಿಯೂ ಹಿತವಲ್ಲದ ಆಹಾರವನ್ನು ದೂರವಿಡುತ್ತದೆ’

● ವಿಕ್ರಮ ವಾಹಿನಿ । ಗೋಕರ್ಣ

ಮಗುವಿಗೆ ಹಿತವಲ್ಲದ ಆಹಾರವನ್ನು ತಾಯಿ ಅಡುಗೇ ಮನೆಯಲ್ಲಿ ಕಾಣದಂತೆ ಅಡಗಿಸಿಡುವಂತೆ, ಪ್ರಕೃತಿಯು ಜೀವಿಗೆ ಹಿತವಲ್ಲದ ಆಹಾರಗಳನ್ನು ನಮ್ಮಿಂದ ಆದಷ್ಟು ದೂರವಿಟ್ಟಿರುತ್ತದೆ. ನಮಗೆ ಹಿತವಾದದ್ದು ರಮಣೀಯವಾದರೆ, ಪ್ರಿಯ ಆಹಾರವನ್ನು ಮರಣೀಯ ಎನ್ನಬಹುದಾಗಿದೆ. ಹಾಗಾಗಿ ಪ್ರಿಯ ಹಾಗೂ ಹಿತ ಆಹಾರಗಳ ವ್ಯತ್ಯಾಸವನ್ನು ಗಮನಿಸಿ ಸ್ವೀಕರಿಸಬೇಕು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 04.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಔಷಧದ ಅಂಗಡಿಯಲ್ಲಿ ಅನೇಕ ಔಷಧಗಳಿರುತ್ತವೆ. ಆದರೆ ಎಲ್ಲವೂ ನಾವು ಸೇವಿಸಲು ಇರುವುದಲ್ಲ. ಹಾಗೆಯೇ ಸೃಷ್ಟಿಯಲ್ಲಿ ಅನೇಕ ಬಗೆಯ ಆಹಾರವಿದೆ. ಆದರೆ ಎಲ್ಲವೂ ನಮಗೆ ಸೂಕ್ತವಲ್ಲ. ನಮಗೆ ಸೂಕ್ತವಾದ ಆಹಾರವನ್ನು ಆಯುರ್ವೇದದಲ್ಲಿ ಹಿತಾಹಾರ ಎನ್ನಲಾಗಿದ್ದು, ಪ್ರಕೃತಿ ನಮಗಾಗಿ ಕೊಟ್ಟಿರುವುದನ್ನು ನಿಹಿತ ಎಂದರೆ, ಶಾಸ್ತ್ರಗಳು ಸೂಚಿಸಿರುವುದನ್ನು ವಿಹಿತ ಎಂದು ಕರೆಯಲಾಗಿದೆ ಎಂದು ಹಿತ - ಅಹಿತ ಆಹಾರಗಳ ಕುರಿತಾಗಿ ವಿವರಿಸಿದರು.

ಸಿಕ್ಕಿದ್ದನ್ನು ಸಿಕ್ಕಂತೆ ತಿನ್ನುವುದು ಮನುಷ್ಯನ ಸ್ವಭಾವವಲ್ಲ. ಸೂಕ್ತವಾದ ಬೇರೆಬೇರೆ ಪದಾರ್ಥಗಳನ್ನು ಸೇರಿಸಿ, ಪದಾರ್ಥಗಳಲ್ಲಿನ ದೋಷಗಳನ್ನು ತೆಗೆದು, ಹಿತವಾದ ಪಾಕವನ್ನು ಮಾಡಿ ಸೇವಿಸುವುದು ಮನುಷ್ಯನ ಪ್ರವೃತ್ತಿಯಾಗಿದೆ. ಪ್ರಕೃತಿಯನ್ನು ಮಾರ್ಪಡಿಸಿಕೊಳ್ಳುವ ವಿಶೇಷ ಅವಕಾಶವನ್ನು ನಮಗೆ ದೇವರು ಕೊಟ್ಟಿದ್ದಾನೆ. ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕಾದ ಕರ್ತವ್ಯ ನಮ್ಮೆಲ್ಲರ ಮೇಲಿದೆ ಎಂದು ತಿಳಿಸಿದರು.



ಪ್ರಾಚೀನ ಆಯುರ್ವೇದ, ಯೋಗಶಾಸ್ತ್ರ ಸೂಚಿಸಿದಂತೆ ಆಹಾರದ ವಿಚಾರದಲ್ಲಿ ಸರಿತಪ್ಪುಗಳನ್ನು ಸಮಾಜದ ಮುಂದೆ ತೆರೆದಿಡುವ ಕಾರ್ಯವನ್ನು ಮಾಡುತ್ತಿದ್ದೇವೆ. ಹಲವರು ಆಸಕ್ತಿಯಿಂದ ಪ್ರತಿದಿನವೂ ಪ್ರವಚನವನ್ನು ಕೇಳುತ್ತಿದ್ದರೆ, ಕೆಲವರು ಆಚರಣೆಗೆ ತಂದುಕೊಳ್ಳುತ್ತಿದ್ದಾರೆ. ನಮ್ಮ ಬಗ್ಗೆ ಕೆಲವರು ಹಗುರವಾದ ಮಾತುಗಳನ್ನು ಆಡಿಕೊಳ್ಳಬಹುದು. ಆದರೆ ಸರಿದಾರಿಯನ್ನು ತೋರಿಸಬೇಕಾದ ಕರ್ತವ್ಯವನ್ನು ನಾವು ಮಾಡುತ್ತಿದ್ದೇವೆ ಎಂದು 'ಅನ್ನಂ ಬ್ರಹ್ಮ' ಪ್ರವಚನ ಮಾಲಿಕೆಯ ಅಗತ್ಯತೆಯ ಕುರಿತಾಗಿ ಹೇಳಿದರು.

ನಿವೃತ್ತ ಪೊಲೀಸ್ ಅಧಿಕಾರಿಗಳು ಹಾಗೂ ಶ್ರೀಮಠದ ಮಾಜಿ ಸಿ.ಇ.ಓ ಕೆ.ಜಿ. ಭಟ್, ಈಶ್ವರೀ ಬೇರ್ಕಡವು, ವಾದಿರಾಜ ಸಾಮಗ, ಮಂಜುನಾಥ ಭಟ್, ಚಂಪಕಾ ಭಟ್, ಸ್ವಾತಿ ಭಾಗ್ವತ್, ವೇಣು ನವಿಲಗೋಣ, ಸದಾನಂದ ಹೆಬ್ಬಾರ್, ದಿನಪ್ರಧಾನರಾಗಿ ರಾಧಾಕೃಷ್ಣ ಬಂದಗದ್ದೆ ದಂಪತಿಗಳು ಉಪಸ್ಥಿತರಿದ್ದರು.

## ಲೋಕಾ ವೈಖರಿಗೆ ಹೈ ಅಸಮಾಧಾನ

1ನೇ ಪುಟದಿಂದ

ಪ್ರಕರಣ ನಡೆದ ಐದು ವರ್ಷಗಳ ಬಳಿಕ ಸಲ್ಲಿಕೆಯಾಗುವ ದೂರುಗಳ ಕುರಿತು ಲೋಕಾಯುಕ್ತರು ವಿಚಾರಣೆ ನಡೆಸಲು ಕಾನೂನಿನಲ್ಲಿ ನಿರ್ಬಂಧವಿದೆ. ಆದರೆ 2006ರಲ್ಲಿ ನಡೆದಿದ್ದ ಘಟನೆಗೆ 2015ರಲ್ಲಿ ದೂರು ಸಲ್ಲಿಕೆಯಾಗಿದ್ದು, ವಿಳಂಬಕ್ಕೆ ಸೂಕ್ತ ಕಾರಣ ದಾಖಲಿಸದೆ ತನಿಖೆ ನಡೆಸಿರುವುದು ಅಧಿಕಾರ ವ್ಯಾಪ್ತಿಯ ಉಲ್ಲಂಘನೆಯಾಗಿದೆ ಎಂದು ಪೀಠ ಹೇಳಿದೆ.

ಇದಲ್ಲದೆ, ಮೂಲ ದೂರಿನ ಸ್ವರೂಪವೇ ಬದಲಾಗಿದ್ದು, ದೂರುದಾರರೇ ಆರೋಪಿಗಳಾಗಿರುವ ಹಿನ್ನೆಲೆಯಲ್ಲಿ ಇದು ಸ್ವಯಂಪ್ರೇರಿತ ವಿಚಾರಣೆಯ ಸ್ವರೂಪ ಪಡೆದಿತ್ತು. ಇಂತಹ ಸಂದರ್ಭದಲ್ಲಿ ಲೋಕಾಯುಕ್ತ ಕಾಯ್ದೆಯ ಸೆಕ್ಷನ್ 7(2) ಮತ್ತು 9(3)(ಎ) ಅನ್ವಯ ಉಪಲೋಕಾಯುಕ್ತರ ಅಭಿಪ್ರಾಯದ ಪ್ರತಿಯನ್ನು ಆರೋಪಿತ ನೌಕರರಿಗೆ ನೀಡಬೇಕಾಗಿತ್ತು. ಆದರೆ, ಈ ಪ್ರಕರಣದಲ್ಲಿ ಅಂತಹ ಪ್ರತಿಯನ್ನು ನೀಡಿಲ್ಲ ಎಂದು ನ್ಯಾಯಾಲಯ ಗಮನಿಸಿದೆ.

**ಶಿಕ್ಷೆ ರದ್ದುಗೊಳಿಸಿದ ಕೆಎಟಿ**

ಬಾಗಲಕೋಟೆ ಜಿಲ್ಲೆಯ ಜಮಖಂಡಿಯ ಸರ್ಕಾರಿ ಶಾಲೆಯ ಸಹ ಶಿಕ್ಷಕ ಯೂಸುಫ್ ಅಲ್ಲೂರ್ ಅವರು ತೇರದಾಳ ಮೈನಾರಿಟಿ ಕೋ-ಆಪರೇಟಿವ್ ಕ್ರೆಡಿಟ್ ಸೊಸೈಟಿಯಲ್ಲಿ ನೇಕಾರರ ಕೋಟಾದಡಿ 2006ರಲ್ಲಿ ಅಕ್ರಮವಾಗಿ ಸಾಲ ಪಡೆದಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ದಸ್ತಗೀರ್ ನಬಿಸಾಬ್ ಕೊರಬು ಅವರು 2015ರಲ್ಲಿ ಲೋಕಾಯುಕ್ತಕ್ಕೆ ದೂರು ನೀಡಿದ್ದರು.

ವಿಚಾರಣೆ ಬಳಿಕ ಉಪಲೋಕಾಯುಕ್ತರ ಶಿಫಾರಸಿನ ಮೇರೆಗೆ ರಾಜ್ಯ ಸರ್ಕಾರ 2021ರಲ್ಲಿ ಯೂಸುಫ್ ಅಲ್ಲೂರ್ ಅವರಿಗೆ ನಾಲ್ಕು ವಾರ್ಷಿಕ ಬಡ್ತಿಗಳನ್ನು ತಡೆಹಿಡಿಯುವ ಹಾಗೂ ನಾಲ್ಕು ವರ್ಷಗಳ ಕಾಲ ಬಡ್ತಿ ಮುಂದೂಡುವ ಶಿಕ್ಷೆ ವಿಧಿಸಿತ್ತು. ಇದನ್ನು ಪ್ರಶ್ನಿಸಿ ಅವರು ಕೆಎಟಿಗೆ ಮೊರೆ ಹೋಗಿದ್ದರು.

ದೂರು ಸಲ್ಲಿಕೆಯಲ್ಲಿ ದೀರ್ಘ ವಿಳಂಬವಾಗಿರುವುದು ಹಾಗೂ ಲೋಕಾಯುಕ್ತ ಕಾಯ್ದೆಯ ನಿಯಮಗಳನ್ನು ಪಾಲಿಸದಿರುವುದನ್ನು ಪರಿಗಣಿಸಿದ ಕೆಎಟಿ ಶಿಕ್ಷೆ ರದ್ದುಪಡಿಸಿತ್ತು. ಈ ಆದೇಶ ಪ್ರಶ್ನಿಸಿ ಉಪಲೋಕಾಯುಕ್ತರು ಹೈಕೋರ್ಟ್‌ಗೆ ಸಲ್ಲಿಸಿದ್ದ ಅರ್ಜಿಯನ್ನು ಇದೀಗ ವಜಾಗೊಳಿಸಿರುವ ನ್ಯಾಯಾಲಯ, ಮುಂದಿನ ದಿನಗಳಲ್ಲಿ ಕಾಯ್ದೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಲೋಕಾಯುಕ್ತ ಅಧಿಕಾರಿಗಳಿಗೆ ತಾಕೀತು ಮಾಡಿದೆ.

ಕಾನೂನುಬದ್ಧ ಪ್ರಕ್ರಿಯೆ ಪಾಲಿಸದಿರುವುದು ಆರೋಪಿತರಿಗೆ ಶಿಕ್ಷೆಯಿಂದ ವಿನಾಯಿತಿ ಸಿಗುವಂತಾಗಬಹುದು ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

# ಕೆರೆ ಒತ್ತುವರಿ ಮಾಡಿದರೆ ಕ್ರಿಮಿನಲ್ ಕೇಸ್: ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ಗ್ರಾಮ ಪಂಚಾಯಿತಿಗಳಿಗೆ ಸೇರಿದ ಕೆರೆಗಳನ್ನು ಹೊಸದಾಗಿ ಒತ್ತುವರಿ ಮಾಡಿದರೆ ನಿರ್ದಾಕ್ಷಿಣ್ಯವಾಗಿ ತೆರವುಗೊಳಿಸಿ, ಒತ್ತುವರಿದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಎಚ್ಚರಿಕೆ ನೀಡಿದರು.



ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಗ್ರಾಮೀಣ ಕುಡಿಯುವ ನೀರು ಪೂರೈಕೆ ದೊಡ್ಡ ಸವಾಲಾಗಿದೆ. ಅಂತರ್ಜಲ ಮಟ್ಟ ನಿರಂತರವಾಗಿ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ಕೆರೆ, ಕಟ್ಟೆ, ಸರೋವರ ಹಾಗೂ ನದಿಗಳಂತಹ ಮೇಲ್ಮೈ ಜಲಮೂಲಗಳನ್ನು ಸಂರಕ್ಷಿಸದಿದ್ದರೆ ಮುಂದಿನ ದಿನಗಳಲ್ಲಿ ಜಲಕ್ಷಾಮ ಎದುರಾಗಲಿದೆ ಎಂದರು.

ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 32,504 ಕೆರೆಗಳಿದ್ದು, 11,498 ಕೆರೆಗಳು ಒತ್ತುವರಿಗೆ ಒಳಗಾಗಿದ್ದವು. ಈ ಪೈಕಿ 6,670 ಕೆರೆಗಳ ಒತ್ತುವರಿ ತೆರವುಗೊಳಿಸಲಾಗಿದೆ. ಇನ್ನೂ 4,828 ಕೆರೆಗಳ ಒಟ್ಟು 11,671 ಎಕರೆ ಭೂಮಿ ಒತ್ತುವರಿ ತೆರವು ಬಾಕಿಯಿದೆ. ಇದನ್ನು ಶೀಘ್ರ ತೆರವುಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ದೇಶದಲ್ಲೇ ಮೊದಲ ಬಾರಿಗೆ ಜಲ ಬಜೆಟಿಂಗ್ ಅನುಷ್ಠಾನಗೊಳಿಸಿದ ರಾಜ್ಯವಾಗಿದೆ. ಸ್ಥಳೀಯವಾಗಿ ಲಭ್ಯವಿರುವ ನೀರು, ಹಾಲಿ ಬೇಡಿಕೆ ಹಾಗೂ ಭವಿಷ್ಯದ ಅಗತ್ಯವನ್ನು ಲೆಕ್ಕಹಾಕಿ ವೈಜ್ಞಾನಿಕವಾಗಿ ನೀರು ಪೂರೈಕೆ ಯೋಜನೆ ರೂಪಿಸಲು ಇದರಿಂದ ನೆರವಾಗಲಿದೆ ಎಂದರು.

ರಾಜ್ಯದ 26,589 ಗ್ರಾಮಗಳಲ್ಲಿ 4.45 ಕೋಟಿ ಜನರು ವಾಸಿಸುತ್ತಿದ್ದು, ಅವರಿಗೆ ಶುದ್ಧ ಕುಡಿಯುವ ನೀರು ಒದಗಿಸಲು ಏಕಗ್ರಾಮ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ. ಮೇಲ್ಮೈ ಜಲದ ಗುಣಮಟ್ಟ ಪರೀಕ್ಷೆಗಾಗಿ 1.51 ಲಕ್ಷ ಮಹಿಳೆಯರಿಗೆ ತರಬೇತಿ ನೀಡಿ ಕ್ಷೇತ್ರೀಯ ಪರೀಕ್ಷಾ ಕಿಟ್‌ಗಳನ್ನು ಒದಗಿಸಲಾಗಿದೆ ಎಂದು ಖಂಡ್ರೆ ಹೇಳಿದರು.

ಜಲ ಸಂರಕ್ಷಣೆ ಕುರಿತು ದೆಹಲಿಯಲ್ಲಿ ನಡೆದ ಇಲಾಖಾ ಶೃಂಗಸಭೆಯಲ್ಲಿ ರಾಜ್ಯದ ಕ್ರಮಗಳ ಕುರಿತು ಪ್ರಾತ್ಯಕ್ಷಿಕೆ ನೀಡಲಾಗಿದ್ದು, ಕೆರೆ, ಸರೋವರ ಹಾಗೂ ನದಿಗಳು ಒತ್ತುವರಿಗೆ ಒಳಗಾಗದಂತೆ ಮತ್ತು ತ್ಯಾಜ್ಯದಿಂದ ಕಲುಷಿತಗೊಳ್ಳದಂತೆ ರಾಷ್ಟ್ರೀಯ ಯೋಜನೆ ರೂಪಿಸುವಂತೆ ಪ್ರಧಾನಿಯವರ ಸಮ್ಮುಖದಲ್ಲಿ ಒತ್ತಾಯಿಸಲಾಗಿದೆ ಎಂದರು.

# ಸೌರಶಕ್ತಿಯಿಂದ ನಮ್ಮ ಮೆಟ್ರೋ ರೈಲು ಓಡಿಸುವ ಯೋಜನೆ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದವರೆಗೆ ನಿರ್ಮಾಣವಾಗುತ್ತಿರುವ 58.19 ಕಿ.ಮೀ. ಉದ್ದದ ನೀಲಿ ಮಾರ್ಗದ ಮೆಟ್ರೋ ರೈಲುಗಳನ್ನು ಸೌರಶಕ್ತಿಯಿಂದ ಸಂಚರಿಸುವ ಸಾಧ್ಯತೆ ಕುರಿತು ಭಾರತೀಯ ವಿಜ್ಞಾನ ಸಂಸ್ಥೆ (ಐಐಎಸ್‌ಸಿ) ಅಧ್ಯಯನ ನಡೆಸಿದೆ. ಸೌರಶಕ್ತಿ ಬಳಕೆಯಿಂದ ಬಿಎಂಆರ್‌ಸಿಎಲ್‌ಗೆ ವಾರ್ಷಿಕ ಸುಮಾರು 61 ಕೋಟಿ ಉಳಿತಾಯವಾಗುವ ಸಾಧ್ಯತೆ ಇದೆ ಎಂದು ಅಧ್ಯಯನ ವರದಿ ತಿಳಿಸಿದೆ.

ಸೆಂಟ್ರಲ್ ಸಿಲ್ಕ್ ಬೋರ್ಡ್–ಕೆ.ಆರ್.ಪುರಂ ನಡುವೆ 19.75 ಕಿ.ಮೀ. ಹಾಗೂ ಕೆ.ಆರ್.ಪುರಂ–ವಿಮಾನ ನಿಲ್ದಾಣದವರೆಗೆ 38.44 ಕಿ.ಮೀ. ಮಾರ್ಗ ಸೇರಿದಂತೆ ಒಟ್ಟು 30 ನಿಲ್ದಾಣಗಳು ಈ ಯೋಜನೆಯಲ್ಲಿವೆ. ಸುಮಾರು 14,788 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಈ ಮಾರ್ಗದಲ್ಲಿ ಸೌರಶಕ್ತಿಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವ ಕುರಿತು ಐಐಎಸ್‌ಸಿಯ ತಜ್ಞರ ತಂಡ ಬಿಎಂಆರ್‌ಸಿಎಲ್‌ಗೆ ವರದಿ ಸಲ್ಲಿಸಿದೆ.

**44,526 ಟನ್ ಇಂಗಾಲ ಹೊರಸೂಸುವಿಕೆ ತಡೆ**

ಐಐಎಸ್‌ಸಿ ಸುಸ್ಥಿರ ಸಾರಿಗೆ ಪ್ರಯೋಗಾಲಯದ ಸಂಚಾಲಕ ಪ್ರೊ. ಆಶಿಶ್ ವರ್ಮಾ ನೇತೃತ್ವದ ಐವರು ತಜ್ಞರ ತಂಡ ಈ ಅಧ್ಯಯನ ನಡೆಸಿದೆ. ನೀಲಿ ಮಾರ್ಗದಲ್ಲಿ ಸೌರಶಕ್ತಿ ಬಳಕೆಯಿಂದ ವಾರ್ಷಿಕ ಸುಮಾರು 44,526 ಟನ್ ಕಾರ್ಬನ್ ಡೈಆಕ್ಸೈಡ್ ಹೊರಸೂಸುವಿಕೆಯನ್ನು ತಡೆಯಬಹುದಾಗಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ. ಇದು ಪರಿಸರ ಸಂರಕ್ಷಣೆಯ ಜೊತೆಗೆ ಮೆಟ್ರೋ ನಿರ್ವಹಣಾ ವೆಚ್ಚ ಕಡಿಮೆ ಮಾಡಲು ಸಹಕಾರಿಯಾಗಲಿದೆ.

ಸೌರಶಕ್ತಿಯ ಮೂಲಕ ಮೆಟ್ರೋ ರೈಲುಗಳ ಕಾರ್ಯಾಚರಣೆಗೆ ಅಗತ್ಯವಾದ ವಿದ್ಯುತ್‌ನ ದೊಡ್ಡ ಪ್ರಮಾಣವನ್ನು ಪೂರೈಸಲು ಸಾಧ್ಯವಾದರೆ, ದೇಶದಲ್ಲೇ ಸೌರಶಕ್ತಿಯನ್ನು ಆಧರಿಸಿದ ಪ್ರಮುಖ ಮೆಟ್ರೋ ಯೋಜನೆಯಾಗಿ ಬೆಂಗಳೂರು ಗುರುತಿಸಿಕೊಳ್ಳುವ ಸಾಧ್ಯತೆ ಇದೆ. ರಸ್ತೆ ಸಂಚಾರದಿಂದ ಉಂಟಾಗುವ ಮಾಲಿನ್ಯ ಕಡಿಮೆ ಮಾಡುವ ನಿಟ್ಟಿನಲ್ಲಿಯೂ ಇದು ಮಹತ್ವದ ಹೆಜ್ಜೆಯಾಗಲಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಮುಂಬರುವ ಮೆಟ್ರೋ ಮಾರ್ಗಗಳಲ್ಲಿಯೂ ಸೌರಶಕ್ತಿಯ ಬಳಕೆಗೆ ಆದ್ಯತೆ ನೀಡುವಂತೆ ಐಐಎಸ್‌ಸಿ ತಜ್ಞರು ಸಲಹೆ ನೀಡಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿರುವ ಬಿಎಂಆರ್‌ಸಿಎಲ್ ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ, ಐಐಎಸ್‌ಸಿ ತಜ್ಞರ ತಂಡ ವರದಿ ಸಲ್ಲಿಸಿದ್ದು, ಅದನ್ನು ಸಮಗ್ರವಾಗಿ ಪರಿಶೀಲಿಸಿದ ಬಳಿಕ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

# ‘ಮ್ಯಾಕಿ ಪಾಲಿಸಿಸ್’ ಹೊಸ ರಾಜಕೀಯ ಪಕ್ಷ ಘೋಷಣೆ




● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕದಲ್ಲಿ ಹೊಸ ಪ್ರಾದೇಶಿಕ ರಾಜಕೀಯ ಪಕ್ಷವಾಗಿ ‘ಮ್ಯಾಕಿ ಪಾಲಿಸಿಸ್’ ಶುಕ್ರವಾರ ಅಧಿಕೃತವಾಗಿ ಘೋಷಣೆಯಾಯಿತು. ಪಕ್ಷದ ಸಂಸ್ಥಾಪಕ ಅಧ್ಯಕ್ಷ ಮಾಧವ್ ಕಿರಣ್ ಅವರು ಪಕ್ಷದ ಹೆಸರು, ಧ್ಯೇಯೋದ್ದೇಶ, ಆಶಯ ಹಾಗೂ ಪ್ರಣಾಳಿಕೆಯನ್ನು ಪ್ರಕಟಿಸಿ, ‘ಐ’ ಚಿಹ್ನೆಯನ್ನು ಅನಾವರಣಗೊಳಿಸಿದರು. ಚುನಾವಣಾ ಆಯೋಗ ನೀಡುವ ಚಿಹ್ನೆಯೇ ಅಂತಿಮವಾಗಲಿದೆ ಎಂದು ತಿಳಿಸಿದರು.

ಪಕ್ಷದ ಸಂಘಟನೆಯನ್ನು ಕಾರ್ಪೊರೇಟ್ ಮಾದರಿಯಲ್ಲಿ ರೂಪಿಸಿ, ಎಲ್ಲ ಹಂತಗಳಲ್ಲೂ ಪಾರದರ್ಶಕತೆ ಹಾಗೂ ಸಾರ್ವಜನಿಕರ ಭಾಗವಹಿಸುವಿಕೆಗೆ ಆದ್ಯತೆ ನೀಡಲಾಗುವುದು. ಪಕ್ಷದ ಪದಾಧಿಕಾರಿಗಳು ಹಾಗೂ ನಾಯಕರನ್ನು ಜನರೇ ಆಯ್ಕೆ ಮಾಡುವ ವ್ಯವಸ್ಥೆ ಜಾರಿಗೆ ಬರಲಿದೆ ಎಂದು ಮಾಧವ್ ಕಿರಣ್ ಹೇಳಿದರು.

ರಾಜ್ಯದ ಪ್ರತಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯನ್ನೂ ಆಯಾ ಕ್ಷೇತ್ರದ ಜನರೇ ಆಯ್ಕೆ ಮಾಡುವ ಅವಕಾಶ ಕಲ್ಪಿಸಲಾಗುವುದು. ಆಯ್ಕೆಯಾದ ಬಳಿಕ ಹಲವು ಹಂತಗಳ ಪರಿಶೀಲನೆ ಪೂರ್ಣಗೊಳಿಸಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಲಾಗುವುದು. ಆಯ್ಕೆಯಾದ ಪ್ರತಿನಿಧಿಗಳು ನಿರೀಕ್ಷಿತ ರೀತಿಯಲ್ಲಿ ಕಾರ್ಯನಿರ್ವಹಿಸದಿದ್ದರೆ, ಸಾಂವಿಧಾನಿಕ ಚೌಕಟ್ಟಿನೊಳಗೆ ಅವರನ್ನು ಬದಲಿಸುವ ಅವಕಾಶವನ್ನೂ ಜನರಿಗೆ ನೀಡಲಾಗುವುದು ಎಂದರು.

ಪಕ್ಷದ ಅಧಿಕೃತ ವೆಬ್‌ಸೈಟ್ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಸಾರ್ವಜನಿಕರು ಪಕ್ಷದ ಆಂತರಿಕ ಹುದ್ದೆಗಳು, ಪದಾಧಿಕಾರಿಗಳು ಮತ್ತು ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ನೇರವಾಗಿ ಭಾಗವಹಿಸಲು ಅವಕಾಶ ಕಲ್ಪಿಸಲಾಗುವುದು.

ಪಕ್ಷದ ಸಂಘಟನೆಯಲ್ಲಿ ಯುವಕರು, ರೈತರು, ಮಹಿಳೆಯರು ಹಾಗೂ ಸಾಮಾನ್ಯ ನಾಗರಿಕರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಅಧಿಕಾರ ಕೇಂದ್ರೀಕರಣಕ್ಕೆ ಅವಕಾಶ ನೀಡದೆ, ತಳಮಟ್ಟದಿಂದಲೇ ಜನರ ಅಭಿಪ್ರಾಯಕ್ಕೆ ಮನ್ನಣೆ ನೀಡಿ ಪಕ್ಷದ ಸಂಘಟನೆ ಹಾಗೂ ಆಡಳಿತ ವ್ಯವಸ್ಥೆಯನ್ನು ರೂಪಿಸುವ ಉದ್ದೇಶ ಹೊಂದಲಾಗಿದೆ.

2028ರ ವಿಧಾನಸಭಾ ಚುನಾವಣೆಯವರೆಗೆ ಪಕ್ಷ ಸಂಘಟನೆ ಹಾಗೂ ಜನಸೇವೆಗೆ ಒತ್ತು ನೀಡಲಾಗುವುದು. ಬಳಿಕ ರಾಜ್ಯದ 224 ಕ್ಷೇತ್ರಗಳಲ್ಲೂ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಗುರಿ ಹೊಂದಲಾಗಿದೆ ಎಂದು ಮಾಧವ್ ಕಿರಣ್ ತಿಳಿಸಿದರು.

# ಅಗರವಾಲ್ ಆಸ್ಪತ್ರೆಯಲ್ಲಿ ಅದ್ದೂರಿಯಾಗಿ ಮಕ್ಕಳ ಜೊತೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ: ಡಾ॥ ಸುನೀತಾ ಅಗಾರವಾಲ್

● ವಿಕ್ರಮ ವಾಹಿನಿ । ಬೆಂಗಳೂರು

ಶಾಂತಿನಗರ ಲ್ಯಾಂಗ್ ಫೋರ್ಡ್ ರಸ್ತೆಯಲ್ಲಿರುವ ಡಾ॥ಅಗರವಾಲ್ ಆಸ್ಪತ್ರೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಅದ್ದೂರಿಯಾಗಿ ಆಚರಿಸಿದರು, ಡಾ॥ಸುನೀತಾ ಅಗರವಾಲ್ ರವರು ಮಕ್ಕಳಿಗೆ ಕೃಷ್ಣನ ವೇಷ ಧರಿಸಿ ಅವರ ಜೊತೆಯಲ್ಲಿ ನಾಡಿನ ಜನರಿಗೆ ಶುಭಕೋರಿದರು.

ಇದೇ ಸಂದರ್ಭದಲ್ಲಿ ಡಾ॥ಸುನೀತಾ ಅಗರವಾಲ್ ರವರು ಮಾತನಾಡಿ ಮಕ್ಕಳು ದೇವರ ಸಮಾನ, ಶ್ರೀ ಕೃಷ್ಣನನ್ನು ಮಕ್ಕಳಲ್ಲಿ ಕಾಣುತ್ತೇವೆ ಅದ್ದರಿಂದ ಡಾ.ಅಗರವಾಲ್ ಆಸ್ಪತ್ರೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಮಕ್ಕಳು, ವೈದ್ಯರು, ಸಿಬ್ಬಂದಿಗಳ ಜೊತೆಯಲ್ಲಿ ಆಚರಿಸಲಾಯಿತು.

ವಿಜ್ಞಾನ ಎಷ್ಟೆ ಮುಂದುವರೆದರೆ, ದೈವ ಶಕ್ತಿ ಇರಬೇಕು. ನಮ್ಮೆಲ್ಲ ಕೆಲಸಗಳಿಗೆ ದೇವರ ಆಶೀರ್ವಾದ ಇದ್ದಾಗ ಜೀವನದಲ್ಲಿ ಸಾಧನೆ ಮಾಡಲು ಸಾಧ್ಯ. ಮಕ್ಕಳು ಇಂದು ಮೊಬೈಲ್ ವಿಡಿಯೊ ಗೇಮ್ಸ್ ಮತ್ತು ಮೊಬೈಲ್ ವೀಕ್ಷಣೆಯಲ್ಲಿ ತೊಡಗಿದ್ದಾರೆ ಇದರಿಂದ ಮಕ್ಕಳ ಬೆಳವಣಿಗೆ, ಕಣ್ಣಿನ ಮೇಲೆ ದುಷ್ಪರಿಣಾಮ ಬೀರುತ್ತದೆ.



ನಮ್ಮ ದೇಶದ ಸಂಸ್ಕೃತಿ, ಇತಿಹಾಸ ಮತ್ತು ಸಾಂಸ್ಕೃತಿಕ ಹಬ್ಬಗಳನ್ನು ಮಕ್ಕಳಿಗೆ ಅರಿವು ಮೂಡಿಸಬೇಕು. ಮತ್ತು ದೇಶಿಯ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಮಕ್ಕಳಿಗೆ ಪ್ರೇರಣೆ ನೀಡಬೇಕು. ಆರೋಗ್ಯವಂತ ಸಮಾಜ ಮತ್ತು ಪ್ರಪಂಚ ನೋಡಲು ದೃಷ್ಟಿ ಸರಿಯಾಗಿ ನೋಡಿಕೊಳ್ಳಬೇಕು ಎಂದು ಹೇಳಿದರು.



**ಅಮೆರಿಕದ ಫಿಲಡೆಲ್ಫಿಯಾದಲ್ಲಿ ಇಂದು ಆರಂಭವಾಗಲಿರುವ ‘ಅಕ್ಕ ವಿಶ್ವ ಕನ್ನಡ ಸಮ್ಮೇಳನ’ದಲ್ಲಿ ಭಾಗವಹಿಸುವ ಮುನ್ನ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರ ಆಶೀರ್ವಾದ ಪಡೆದರು.**

# ಬಾಲಕಿ ನಾಪತ್ತೆ ಪ್ರಕರಣ: ಆರೋಪಿ ಸವಾಲ್, ಪೋಲೀಸ್ ಕಕ್ಕಾಬಿಕ್ಕಿ

1ನೇ ಪುಟದಿಂದ

ಪೊಲೀಸರು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದಾಗ, ಪರ್ಚೂರು ಮೂಲದ 28 ವರ್ಷದ ಶೇಖ್ ಜಾನ್‌ಸೈದಾ ಎಂಬಾತ ಬಾಲಕಿಯನ್ನು ಬೈಕ್‌ನಲ್ಲಿ ಕರೆದೊಯ್ದಿರುವ ಮಾಹಿತಿ ಲಭ್ಯವಾಗಿದೆ ಎಂದು ತಿಳಿಸಿದ್ದಾರೆ. ಪ್ರಕರಣ ದಾಖಲಾದ ಬಳಿಕ ಆರೋಪಿ ನಿರಂತರವಾಗಿ ಸ್ಥಳ ಬದಲಾಯಿಸುತ್ತಿರುವ ಹಿನ್ನೆಲೆಯಲ್ಲಿ ಆತನ ಪತ್ತೆ ಕಷ್ಟವಾಗಿದೆ.

ಹೈಕೋರ್ಟ್ ಸೂಚನೆಯಂತೆ ಎಸ್‌ಐ ನೇತೃತ್ವದಲ್ಲಿ ವಿಶೇಷ ತಂಡ ರಚಿಸಿ ಪರ್ಚೂರು, ನೆಲ್ಲೂರು, ಕೊಯಮತ್ತೂರು ಹಾಗೂ ಕೇರಳದ ಪಾಲಕ್ಕಾಡ್ ಸೇರಿದಂತೆ ಹಲವು ಪ್ರದೇಶಗಳಲ್ಲಿ ಶೋಧ ನಡೆಸಲಾಗಿದೆ. ಸಿಸಿಟಿವಿ ದೃಶ್ಯಗಳು ಹಾಗೂ ಲಾಡ್ಜ್‌ಗಳಲ್ಲಿ ದೊರೆತ ಮಾಹಿತಿಯ ಆಧಾರದ ಮೇಲೆ ಬಾಲಕಿ ಮತ್ತು ಆರೋಪಿ ಸಿಕಂದರಾಬಾದ್‌ಗೂ ತೆರಳಿರುವ ಸುಳಿವು ದೊರೆತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿ 10ಕ್ಕೂ ಹೆಚ್ಚು ಮೊಬೈಲ್ ಫೋನ್ ಹಾಗೂ ಸಿಮ್ ಕಾರ್ಡ್‌ಗಳನ್ನು ಬಳಸುತ್ತಿರುವುದು ತನಿಖೆಯಲ್ಲಿ ತಿಳಿದುಬಂದಿದೆ ಎನ್ನಲಾಗಿದೆ. ಆನ್‌ಲೈನ್ ಪಾವತಿಗಳನ್ನು ತಪ್ಪಿಸಿ ನಗದು ಬಳಕೆ ಮಾಡುತ್ತಿದ್ದು, ಆಗಾಗ ಸ್ಥಳ ಬದಲಾಯಿಸುತ್ತಿದ್ದಾನೆ. ವಿವಿಧ ಸಾಮಾಜಿಕ ಜಾಲತಾಣಗಳ ಖಾತೆಗಳ ಮೂಲಕ ಸಂಪರ್ಕ ಸಾಧಿಸುತ್ತಿರುವ ಹಿನ್ನೆಲೆಯಲ್ಲಿ ತಾಂತ್ರಿಕ ನೆರವಿನಿಂದ ಆತನ ಚಲನವಲನ ಪತ್ತೆಹಚ್ಚಲು ಪೊಲೀಸರು ಪ್ರಯತ್ನಿಸುತ್ತಿದ್ದಾರೆ.

ಇತ್ತೀಚೆಗೆ ಇನ್‌ಸ್ಟಾಗ್ರಾಮ್ ಮೂಲಕ ಬಾಲಕಿಯ ಪೋಷಕರಿಗೆ ಸಂದೇಶ ಕಳುಹಿಸಿ ಪೊಲೀಸರಿಗೆ ಸವಾಲು ಹಾಕಿದ್ದಾನೆ ಎನ್ನಲಾಗಿದ್ದು, ಈ ಸುಳಿವಿನ ಆಧಾರದ ಮೇಲೂ ತನಿಖೆ ನಡೆಯುತ್ತಿದೆ.

ಬಾಲಕಿಯನ್ನು ಸುರಕ್ಷಿತವಾಗಿ ಪತ್ತೆಹಚ್ಚಿ ರಕ್ಷಿಸುವುದು ಪೊಲೀಸರ ಮೊದಲ ಆದ್ಯತೆಯಾಗಿದ್ದು, ಪ್ರಕರಣಕ್ಕೆ ಯಾವುದೇ ಅನಗತ್ಯ ಧಾರ್ಮಿಕ ಅಥವಾ ರಾಜಕೀಯ ಬಣ್ಣ ನೀಡದೆ ವದಂತಿಗಳಿಗೆ ಕಿವಿಗೊಡದಂತೆ ಗುಂಟೂರು ಜಿಲ್ಲಾ ಎಸ್ಪಿ ವಕುಲ್ ಜಿಂದಾಲ್ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ತನಿಖೆಯ ಭಾಗವಾಗಿ ಪೊಲೀಸರು ಬಾಲಕಿ ಹಾಗೂ ಆರೋಪಿಯ ಸಂಪರ್ಕಕ್ಕೆ ಬಂದಿರುವ ಸಾಧ್ಯತೆಯಿರುವ ವ್ಯಕ್ತಿಗಳ ವಿಚಾರಣೆಯನ್ನೂ ನಡೆಸುತ್ತಿದ್ದಾರೆ. ವಿವಿಧ ಪ್ರದೇಶಗಳ ಸಿಸಿಟಿವಿ ದೃಶ್ಯಾವಳಿ, ಮೊಬೈಲ್ ಸ್ಥಳದ ಮಾಹಿತಿ ಹಾಗೂ ಸಾಮಾಜಿಕ ಜಾಲತಾಣಗಳ ಚಟುವಟಿಕೆಗಳನ್ನು ಸಮನ್ವಯಗೊಳಿಸಿ ಪರಿಶೀಲಿಸಲಾಗುತ್ತಿದೆ.

ಪ್ರಕರಣದ ತನಿಖೆ ಮುಂದುವರಿದಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಿಂದ ಲಭ್ಯವಾಗುವ ಯಾವುದೇ ವಿಶ್ವಾಸಾರ್ಹ ಮಾಹಿತಿ ಪೊಲೀಸರಿಗೆ ಮಹತ್ವದ್ದಾಗಿದೆ. ಬಾಲಕಿ ಅಥವಾ ಆರೋಪಿಯ ಕುರಿತು ಮಾಹಿತಿ ದೊರೆತಲ್ಲಿ ತಕ್ಷಣ ಪೊಲೀಸರಿಗೆ ತಿಳಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದು, ತನಿಖೆಗೆ ಅಡ್ಡಿಯಾಗುವ ರೀತಿಯಲ್ಲಿ ಊಹಾಪೋಹ ಅಥವಾ ದೃಢೀಕರಿಸದ ಮಾಹಿತಿಯನ್ನು ಹರಡದಂತೆ ಎಚ್ಚರಿಕೆ ನೀಡಿದ್ದಾರೆ.

# ಬೆಂಗಳೂರಿನ ಸಂಚಾರ ದಟ್ಟಣೆಯ ಅಧ್ಯಯನ ಮಾಡಿ: ಶೋಭಾ ಕರಂದ್ಲಾಜೆ ಒತ್ತಾಯ

● ವಿಕ್ರಮ ವಾಹಿನಿ । ಬೆಂಗಳೂರು

ಈಗಿರುವ ಪ್ರಕಾರದ ಟನಲ್ ರೋಡ್ ಬೇಡ. ಮೊದಲು ಬೆಂಗಳೂರಿನ ಸಂಚಾರ ದಟ್ಟಣೆಯ ಅಧ್ಯಯನ ಮಾಡಿ ಎಂದು ಕೇಂದ್ರ ಸಚಿವೆ ಕು. ಶೋಭಾ ಕರಂದ್ಲಾಜೆ ಅವರು ಆಗ್ರಹಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಂಗಳೂರಿನ ಟನಲ್ ರೋಡ್ ನ ಮೊದಲ ಹಂತದ ಅಂದಾಜಿನ ಪ್ಯಾಕೇಜ್ 5484 ಕೋಟಿ ರೂ ಇತ್ತು. ಅದನ್ನು 10734 ಕೋಟಿಗೆ ಹೆಚ್ಚು ಮಾಡಿದ್ದಾರೆ. ಎರಡನೇ ಪ್ಯಾಕೇಜ್ 11,263 ಕೋಟಿಯದು. ಹೀಗೆ ಟೆಂಡರ್ ಮೊತ್ತ ತೀವ್ರವಾಗಿ ಎಂದರೆ, 97% ಹೇಗೆ ಜಾಸ್ತಿ ಆಗಿದೆ ಎಂದು ಪ್ರಶ್ನಿಸಿದರು.

**10 ಸಾವಿರ ಕೋಟಿ ಲೂಟಿ..**

ಟೆಂಡರ್ ಪ್ರೀಮಿಯಮ್ ನ 5% ಕ್ಕಿಂತ ಜಾಸ್ತಿ ಆಗಬಾರದು ಅಂತ ಸರ್ಕಾರ ಸುತ್ತೋಲೆ ಹೊರಡಿಸಿತ್ತು. ಇದರಲ್ಲಿ 10 ಸಾವಿರ ಕೋಟಿ ಲೂಟಿ ಹೊಡೆಯಲಿದ್ದಾರೆ. 10 ಸಾವಿರ ಕೋಟಿಯನ್ನು ರಾಹುಲ್ ಗಾಂಧಿ ಬಿಡ್ಡಿಂಗ್ ಕರೆದಿರಬೇಕು ಎಂದು ಟೀಕಿಸಿದರು. ಕರ್ನಾಟಕದ ಹಣವನ್ನು ಕಾಂಗ್ರೆಸ್ ಲೂಟಿ ಮಾಡಲು ಹೊರಟಿದೆ ಎಂದು ದೂರಿದರು. ಹೈಕೋರ್ಟ್ ತಾಂತ್ರಿಕ ವರದಿ ಕೊಡಿ ಅಂತ ಕೇಳಿದೆ. ಯಾವುದೇ ಪೂರ್ವ ತಯಾರಿ ಇಲ್ಲದೆ, ವೈಜ್ಞಾನಿಕ ವರದಿ ಇಲ್ಲದೆ ತರಾತುರಿಯಲ್ಲಿ ಟೆಂಡರ್ ಕೊಟ್ಟಿದ್ದಾರೆ ಎಂದು ಆರೋಪಿಸಿದರು.



ಮೆಟ್ರೋ, ಟನಲ್ ಒಟ್ಟಿಗೆ ಹೋದ್ರೆ ಸುರಕ್ಷತೆ ಹೇಗೆ ಎಂದು ಕೇಳಿದರು. ಏನು ಅಧ್ಯಯನ ಮಾಡಿದ್ದೀರಿ ಎಂದು ಕೇಳಿದರು. ನಿಮಗೆ ಅಧಿಕಾರದ ಉಳಿದಿರೋ ಒಂದು ವರ್ಷದಲ್ಲಿ ನೀವು ಬೆಂಗಳೂರನ್ನು ಹಾಳು ಮಾಡಿ ಹೋಗಬೇಡಿ. ಇವತ್ತು ಕೃಷ್ಣ ಜನ್ಮಾಷ್ಟಮಿ ಆ ಭಗವಂತನಿಗೆ ಪ್ರಾರ್ಥನೆ ಮಾಡುತ್ತೇವೆ ಎಂದು ನುಡಿದರು.

ಬೆಂಗಳೂರಿನ ಜನರ ವಿರೋಧದ ಕಾರಣಕ್ಕಾಗಿ, ಹಿರಿಯ ನಾಗರಿಕರು ದೊಡ್ಡ ಪ್ರಮಾಣದ ಹೋರಾಟ ಮಾಡಿದ ಪರಿಣಾಮವಾಗಿ ಸರ್ಕಾರ ತಾತ್ಕಾಲಿಕವಾಗಿ ಪಾರ್ಕ್ ಮಸೂದೆಯನ್ನು ವಾಪಸ್ ಪಡೆದಿದೆ. ಸಾರ್ವಜನಿಕರ ಅಭಿಪ್ರಾಯ ಕೇಳಿ ನಂತರ ಸದನದಲ್ಲಿ ಇದನ್ನ ಮತ್ತೆ ವಾಪಸ್ ತೆಗೆದುಕೊಂಡು ಬರುವುದಾಗಿ ಸಿಎಂ ಹೇಳಿದ್ದಾರೆ.

ಇನ್ನೊಬ್ಬರು ಸೂಪರ್ ಸಿಎಂ ಪ್ರಿಯಾಂಕ್ ಖರ್ಗೆ ಇದರಲ್ಲಿ ಫುಲ್ ಸ್ಟಾಪ್ ಕೂಡ ಚೇಂಜ್ ಮಾಡದೇ ವಾಪಸ್ ತರ್ತೀವಿ ಅಂತ ಹೇಳಿದ್ದಾರೆ ಎಂದು ಟೀಕಿಸಿದರು.

ಕೆರೆಗಳ ಸಂರಕ್ಷಣಾ ಬಿಲ್ ತರಲು ಹೊರಟಿದ್ದಾರೆ; ಈಗಾಗಲೇ ರಿಯಲ್ ಎಸ್ಟೇಟ್ ಗೆ ಕೆರೆಗಳನ್ನು ತಿಂದಿದ್ದಾರೆ. ಎಲ್ಲಾ ಕೆರೆಗಳನ್ನು ಲೇಔಟ್ ಮಾಡಿ ಕಾಂಪ್ಲೆಕ್ಸ್ ಮಾಡಿದ್ದಾರೆ. ಇದರಿಂದಲೇ ಮಳೆ ಬಂದರೆ ಬೆಂಗಳೂರು ಕೆರೆಯಂತಾಗುತ್ತದೆ ಎಂದು ವಿಶ್ಲೇಷಿಸಿದರು.

ನಮ್ಮ ಪಾರ್ಕ್, ಕೆರೆಗಳನ್ನು ತೆಗೆದುಕೊಂಡು ನೀವು ರಿಯಲ್ ಎಸ್ಟೇಟ್ ಮಾಡುವುದು ಬೇಕಾಗಿಲ್ಲ . ಇನ್ನು ನೀವು ಇರೋದು ಒಂದು ವರ್ಷ ಅಷ್ಟರಲ್ಲಿ ಕರ್ನಾಟಕವನ್ನ ಹಾಳು ಮಾಡಬೇಡಿ ಎಂದು ಎಚ್ಚರಿಸಿದರು. ನಿಮಗೆ ದುಡ್ಡಿನ ಭೂತ ಹಿಡಿದಿದೆ. ಪ್ರತಿ ತಿಂಗಳು ನೀರಿನ ಬಿಲ್,ಕರೆಂಟ್ ಬಿಲ್,ಕಸದ ಬಿಲ್ ಎಲ್ಲವೂ ಜಾಸ್ತಿ ಆಗುತ್ತಿದೆ ಎಂದು ಟೀಕಿಸಿದರು.

ಬೆಂಗಳೂರು ಕೇಂದ್ರ ಸಂಸದ ಪಿ.ಸಿ. ಮೋಹನ್, ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ, ಬಿಜೆಪಿ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್ ಅವರು ಇದ್ದರು.

# ಇಸ್ರೋದ ಭೂಸ್ಥಿರ ಕಕ್ಷೆಯ ಚಿತ್ರಗ್ರಹಣ ಉಪಗ್ರಹ ಉಡಾವಣೆ

● ವಿಕ್ರಮ ವಾಹಿನಿ । ಬೆಂಗಳೂರು

ಭಾರತದ ಮೊದಲ ಭೂಸ್ಥಿರ ಕಕ್ಷೆಯ ಚಿತ್ರಗ್ರಹಣ ಉಪಗ್ರಹ–ಇಮೇಜಿಂಗ್ ಸ್ಯಾಟಲೈಟ್, ಇಒಎಸ್ – 05 ಅನ್ನು ಹೊತ್ತ ಜಿ.ಎಸ್.ಎಲ್.ವಿ ಎಫ್ 17 ರಾಕೆಟ್ ಅನ್ನು ಇಸ್ರೋ ಇಂದು ಮುಂಜಾನೆ ಯಶಸ್ವಿಯಾಗಿ ಉಡಾವಣೆ ಮಾಡಿದೆ. ಆಂಧ್ರಪ್ರದೇಶದ ಶ್ರೀಹರಿಕೋಟಾದಲ್ಲಿರುವ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಬೆಳಗಿನ ಜಾವ 2.55ಕ್ಕೆ ರಾಕೆಟ್ ಉಡಾವಣೆಯಾಯಿತು. 27 ಗಂಟೆಗಳ ಇಳಿ, ಎಣಿಕೆ ಬಳಿಕ ನಡೆದ ಉಡಾವಣೆ ಯಶಸ್ವಿಯಾಯಿತು.

ಉಡಾವಣೆಯಾದ ಸುಮಾರು 18 ನಿಮಿಷಗಳ ಬಳಿಕ 2,367 ಕೆ.ಜಿ. ತೂಕದ ಇಒಎಸ್–05 ಉಪಗ್ರಹವನ್ನು ಉಪ–ಭೂಸ್ಥಿರ ಕಕ್ಷೆಗೆ ಯಶಸ್ವಿಯಾಗಿ ಸೇರಿಸಲಾಯಿತು ಎಂದು ಇಸ್ರೋ ತಿಳಿಸಿದೆ.

ಈ ಅತ್ಯಾಧುನಿಕ ಉಪಗ್ರಹದಿಂದ ನೈಜ ಸಮಯದ ಭೂಚಿತ್ರಗಳು ಲಭ್ಯವಾಗಲಿವೆ. ಇದರಿಂದ ಕೃಷಿ, ವಿಪತ್ತು ನಿರ್ವಹಣೆ ಸೇರಿದಂತೆ ಹಲವು ಕ್ಷೇತ್ರಗಳಿಗೆ ನೆರವಾಗಲಿದೆ.

ಇಸ್ರೋ ಅಧ್ಯಕ್ಷ ವಿ. ನಾರಾಯಣನ್ ಮಾತನಾಡಿ, ಈ ಮಿಷನ್ ಭಾರತದ ಭೂ ವೀಕ್ಷಣಾ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸಲಿದ್ದು, ಭೂ ವೀಕ್ಷಣಾ ಸೇವೆಗಳ ವಿತರಣೆಯನ್ನು ಸುಧಾರಿಸಲಿದೆ ಎಂದು ತಿಳಿಸಿದ್ದಾರೆ. ಉಪಗ್ರಹದ ದತ್ತಾಂಶವನ್ನು ದೇಶದ ವಿವಿಧ ಅಭಿವೃದ್ಧಿ ಮತ್ತು ಯೋಜನಾ ಕಾರ್ಯಗಳಿಗೆ ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಇದು ಮಹತ್ವದ ಹೆಜ್ಜೆಯಾಗಿದೆ.

# ರೈತರ ಸಾಲ ಮನ್ನಾಕ್ಕೆ ಕೇಂದ್ರದ ನೆರವು ಕೋರಿ ಸರ್ವಪಕ್ಷ ನಿಯೋಗ: ಡಿಕೆಶಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ರೈತರ ಸಾಲ ಮನ್ನಾಕ್ಕೆ ಕೇಂದ್ರ ಸರ್ಕಾರದ ನೆರವು ಕೋರಿ ಸರ್ವಪಕ್ಷ ನಿಯೋಗವನ್ನು ದೆಹಲಿಗೆ ಕರೆದೊಯ್ಯಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸದಾಶಿವನಗರದ ನಿವಾಸದ ಬಳಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಬರ ಪರಿಸ್ಥಿತಿ ಇದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರೇ ಹೇಳಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ರಾಜ್ಯಕ್ಕೆ ಬರ ಪರಿಹಾರ ಹಾಗೂ ರೈತರ ಸಾಲ ಮನ್ನಾಕ್ಕೆ ಅಗತ್ಯ ನೆರವು ನೀಡಬೇಕು ಎಂದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಸೇರಿದಂತೆ ಬಿಜೆಪಿ ನಾಯಕರು ನಿಯೋಗದೊಂದಿಗೆ ದೆಹಲಿಗೆ ತೆರಳಿ ಕೇಂದ್ರದ ಮೇಲೆ ಒತ್ತಡ ಹೇರಬೇಕು ಎಂದು ಹೇಳಿದರು.

ಬರದ ಕುರಿತು ಮೂರು ದಿನಗಳ ವಿಶೇಷ ಅಧಿವೇಶನ ರಾಜ್ಯದ ಬರ ಪರಿಸ್ಥಿತಿ, ರೈತರ ಸಮಸ್ಯೆಗಳು ಹಾಗೂ ಕಸ್ತೂರಿರಂಗನ್ ವರದಿ ಕುರಿತು ಚರ್ಚಿಸಲು ಮೂರು ದಿನಗಳ ವಿಶೇಷ ಅಧಿವೇಶನ ಕರೆಯಲಾಗಿದೆ. ಎಲ್ಲ ಶಾಸಕರಿಗೂ ಮುಕ್ತವಾಗಿ ಚರ್ಚಿಸಲು ಅವಕಾಶ ನೀಡಲಾಗುವುದು. ಅಧಿವೇಶನವನ್ನು ಏಳು ದಿನಗಳಿಗೆ ವಿಸ್ತರಿಸುವಂತೆ ವಿಪಕ್ಷಗಳು ಮಾಡಿರುವ ಬೇಡಿಕೆಯನ್ನು ಸದನದಲ್ಲಿ ಚರ್ಚಿಸಿ ತೀರ್ಮಾನಿಸಲಾಗುವುದು ಎಂದರು.

ಕಸ್ತೂರಿರಂಗನ್ ವರದಿಯಿಂದ ರಾಜ್ಯದ ಹಲವು ಜಿಲ್ಲೆಗಳು ಹಾಗೂ ಗ್ರಾಮಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ರಾಜ್ಯದ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ನಿರ್ಧಾರ ಕೈಗೊಳ್ಳಲಾಗುವುದು ಎಂದು ಶಿವಕುಮಾರ್ ಹೇಳಿದರು.

**ಬೆಂಗಳೂರು ಅಭಿವೃದ್ಧಿ ವಿಚಾರದಲ್ಲಿ ಬಿಜೆಪಿ ವಿರುದ್ಧ ವಾಗ್ದಾಳಿ**

ಬೆಂಗಳೂರು ಅಭಿವೃದ್ಧಿ ಯೋಜನೆಗಳಿಗೆ ಬಿಜೆಪಿ ವಿರೋಧ ವ್ಯಕ್ತಪಡಿಸುತ್ತಿದೆ ಎಂದು ಆರೋಪಿಸಿದ ಅವರು, ಸಂಚಾರ ದಟ್ಟಣೆ ನಿವಾರಣೆಗೆ ಸುರಂಗ ರಸ್ತೆ, ಡಬಲ್ ಡೆಕ್ಕರ್ ಮಾರ್ಗ ಸೇರಿದಂತೆ ಹಲವು ಮೂಲಸೌಕರ್ಯ ಯೋಜನೆಗಳ ಅಗತ್ಯವಿದೆ ಎಂದರು. ಲಾಲ್‌ಬಾಗ್ ಜಾಗವನ್ನು ಸುರಂಗ ರಸ್ತೆ ಯೋಜನೆಗಾಗಿ ಬಳಸುವ ಉದ್ದೇಶ ಸರ್ಕಾರಕ್ಕಿಲ್ಲ ಹಾಗೂ ಉದ್ಯಾನವನಗಳನ್ನು ಮಾರಾಟ ಮಾಡುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು.



ಬಿಜೆಪಿ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ ಶಿವಕುಮಾರ್, ಮುಖ್ಯಮಂತ್ರಿ ಸ್ಥಾನದಲ್ಲಿರುವ ತಾವು ಬಳಸಲಾಗದಂತಹ ಪದಗಳನ್ನು ವಿರೋಧ ಪಕ್ಷದ ನಾಯಕರು ಹಾಗೂ ಬಿಜೆಪಿ ನಾಯಕರು ಬಳಸುತ್ತಿದ್ದಾರೆ. ಸಾರ್ವಜನಿಕ ಜೀವನದಲ್ಲಿ ಜವಾಬ್ದಾರಿಯಿಂದ ಮಾತನಾಡಬೇಕು ಎಂದು ಸಲಹೆ ನೀಡಿದರು.

**ಪ್ರಾಸಿಕ್ಯೂಷನ್ ಕಡತಗಳ ಪರಿಶೀಲನೆ**

ಬಿ. ನಾಗೇಂದ್ರ, ಜಿ. ಜನಾರ್ದನ ರೆಡ್ಡಿ, ಎಂ.ಪಿ. ರೇಣುಕಾಚಾರ್ಯ ಸೇರಿದಂತೆ ಹಲವು ನಾಯಕರ ವಿರುದ್ಧದ ಪ್ರಾಸಿಕ್ಯೂಷನ್‌ಗೆ ಸಂಬಂಧಿಸಿದ ಕಡತಗಳು ರಾಜ್ಯಪಾಲರಿಂದ ಬಂದಿವೆ. ಅವುಗಳನ್ನು ಕಾನೂನುಬದ್ಧವಾಗಿ ಪರಿಶೀಲಿಸಿದ ಬಳಿಕವೇ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಯಾವುದೇ ಆತುರದ ನಿರ್ಧಾರ ಕೈಗೊಳ್ಳುವುದಿಲ್ಲ ಎಂದು ತಿಳಿಸಿದರು.

**ದಸರಾಕ್ಕೆ ಹೊಸ ಆಕರ್ಷಣೆ**

ಈ ಬಾರಿಯ ಮೈಸೂರು ದಸರಾವನ್ನು ಹೊಸ ಚಿಂತನೆ ಹಾಗೂ ಸಾಂಸ್ಕೃತಿಕ ವೈವಿಧ್ಯತೆಯೊಂದಿಗೆ ಆಚರಿಸಲು ನಿರ್ಧರಿಸಲಾಗಿದೆ. ಭಾರತೀಯ ವಾಯುಪಡೆ ಹಾಗೂ ರಕ್ಷಣಾ ಸಚಿವಾಲಯದೊಂದಿಗೆ ಮಾತುಕತೆ ನಡೆಸಲಾಗಿದ್ದು, ದಸರಾ ಕಾರ್ಯಕ್ರಮದಲ್ಲಿ ವಾಯುಪಡೆಯ ತುಕಡಿ ಭಾಗವಹಿಸುವ ಕುರಿತು ಚರ್ಚಿಸಲಾಗಿದೆ. ಬೀದರ್, ಕಲಬುರಗಿ ಸೇರಿದಂತೆ ದಕ್ಷಿಣ ಭಾರತದ ವಿವಿಧ ಭಾಗಗಳ ಸಾಂಸ್ಕೃತಿಕ ಕಲೆಗಳಿಗೆ ಹೆಚ್ಚಿನ ಅವಕಾಶ ನೀಡಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ಬಿಜೆಪಿ ಸರ್ಕಾರದಲ್ಲೇ ಶೇ.7 ಜಾಬ್ ಉಳಿತಾಯ ಕಡಿತ ಆದೇಶ: ಈಶ್ವರ ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ಕೆ.ಆರ್.ಐ.ಡಿ.ಎಲ್.ನಲ್ಲಿ ಶೇ.7 ರಷ್ಟು ಜಾಬ್ ಉಳಿತಾಯ ಕಡಿತಕ್ಕೆ ಬಿಜೆಪಿ ಸರ್ಕಾರದ ಅವಧಿಯಲ್ಲೇ ಸುತ್ತೋಲೆ ಹೊರಡಿಸಲಾಗಿದ್ದರೂ, ಪ್ರತಿಪಕ್ಷ ನಾಯಕರು ಕಾಂಗ್ರೆಸ್ ಸರ್ಕಾರ ದೂಷಿಸುತ್ತಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿರುಗೇಟು ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂಗಳೂರು ಕೆ.ಆರ್.ಐ.ಡಿ.ಎಲ್.ನ ಇಬ್ಬರು ಎಂಜಿನಿಯರುಗಳ ಮೇಲೆ ಪುತ್ತೂರಿನ ಶಾಸಕ ಅಶೋಕ್ ಕುಮಾರ್ ರೈ ಆರೋಪ ಮಾಡಿ ಮುಖ್ಯಮಂತ್ರಿಗಳಿಗೆ ಪತ್ರ ಬರೆದ ವಿಷಯ ತಿಳಿದ ಕೂಡಲೇ ತಾವು ಸೂಪರಿಂಟೆಂಡೆಂಟ್ ಎಂಜಿನಿಯರ್ ದರ್ಜೆಯ ಅಧಿಕಾರಿ ನೇತೃತ್ವದ ತಂಡದಿಂದ ತನಿಖೆಗೆ ಆದೇಶ ನೀಡಿ, 7 ದಿನಗಳಲ್ಲಿ ವರದಿ ನೀಡಲು ಸೂಚಿಸಿರುವುದಾಗಿ ತಿಳಿಸಿದರು.

ವರದಿಯಲ್ಲಿ ಶಾಸಕರು ಹೆಸರಿಸಿರುವ ಎಂಜಿನಿಯರುಗಳು ಭ್ರಷ್ಟಾಚಾರ ಮಾಡಿರುವುದು ಸಾಬೀತಾದರೆ, ಅಮಾನತು ಮಾಡಿ, ನಿಯಮಾನುಸಾರ ಕ್ರಮ ವಹಿಸಲಾಗುವುದು ಎಂದ ಅವರು, ತನಿಖಾ ವರದಿ ಬರುವ ಮೊದಲೇ ಪ್ರತಿಪಕ್ಷದ ನಾಯಕರು



ಆತುರ ತೋರುತ್ತಿರುವುದು ಹಾಸ್ಯಾಸ್ಪದ ಎಂದರು.

ಗ್ರಾಮೀಣಾಭಿವೃದ್ಧಿ ಇಲಾಖೆ ಪಾರದರ್ಶಕ, ಜನಸ್ನೇಹಿ ಮತ್ತು ಭ್ರಷ್ಟಾಚಾರ ಮುಕ್ತವಾಗಿರಬೇಕು ಎಂಬುದು ತಮ್ಮ ಆಶಯವಾಗಿದೆ ಎಂದ ಈಶ್ವರ ಖಂಡ್ರೆ, ಯಾವುದೇ ಅಧಿಕಾರಿ, ಸಿಬ್ಬಂದಿ ಸಚಿವರ ಹೆಸರು ಹೇಳಿ ಭ್ರಷ್ಟಾಚಾರ ಮಾಡಿರುವ ಬಗ್ಗೆ ಸಾಕ್ಷ್ಯ, ಪುರಾವೆ ಸಹಿತ ದೂರು ಬಂದರೆ ಯಾವ ಮುಲಾಜಿಗೂ ಒಳಗಾಗದೆ ಕಠಿಣ ಕ್ರಮ ಜರುಗಿಸುವುದಾಗಿ ಹೇಳಿದರು.

ಅಶೋಕ್ ಕುಮಾರ್ ರೈ ಅವರ ಆರೋಪಕ್ಕೆ ಸಂಬಂಧಿಸಿದಂತೆ ಕೆ.ಆರ್.ಐ.ಡಿ.ಎಲ್. ಎಂ.ಡಿ. ಸ್ಪಷ್ಟೀಕರಣ ನೀಡಿದ್ದಾರೆ. ಕೆಆರ್.ಐ.ಡಿ.ಎಲ್.ನ 203ನೇ ಆಡಳಿತ ಮಂಡಳಿ ಸಭೆಯಲ್ಲೇ ನಿರ್ಣಯ ಕೈಗೊಂಡು 2021ರ ಆಗಸ್ಟ್ 21ರಂದು ಶೇ.7ರಷ್ಟು ಜಾಬ್ ಉಳಿತಾಯ ಕಡಿತಕ್ಕೆ ಸುತ್ತೋಲೆ ಹೊರಡಿಸಲಾಗಿದೆ. ಆಗ ಯಾರ ಸರ್ಕಾರ ಇತ್ತು, ಯಾರು ಕೆ.ಆರ್.ಐ.ಡಿ.ಎಲ್. ಅಧ್ಯಕ್ಷರಾಗಿದ್ದರು ಎಂದು ಈಶ್ವರ ಖಂಡ್ರೆ ಪ್ರಶ್ನಿಸಿದರು.

ಕೆಆರ್.ಐ.ಡಿ.ಎಲ್. ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಯಾಗಿದ್ದು, 203ನೇ ಆಡಳಿತದ ಮಂಡಳಿ ಸಭಾ ನಡಾವಳಿಯಂತೆ ಈ ರೀತಿ ಚಾರ್ಜ್ ಪಡೆಯಲು ಅವಕಾಶ ಇದೆ. ಬಹುಶಃ ಮಾಹಿತಿಯ ಕೊರತೆಯಿಂದ ಶಾಸಕರು ಪತ್ರ ಬರೆದಿರಬಹುದು ಎಂದು ಈಶ್ವರ ಖಂಡ್ರೆ ಹೇಳಿದರು.

ಆದರೂ ಸಚಿವ ಹೆಸರು ಹೇಳಿ ಹಣ ಕೇಳುತ್ತಿದ್ದಾರೆ ಎಂಬ ಗುರುತರ ಆರೋಪ ಬಂದಿರುವ ಹಿನ್ನೆಲೆಯಲ್ಲಿ ತನಿಖೆಗೆ ಆದೇಶ ಕೊಟ್ಟಿದ್ದೇನೆ. ತನಿಖಾ ವರದಿ ಬಂದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗವುದು ಎಂದರು.

1998ರಿಂದ 2006ರವರೆಗೆ ಅಶೋಕ್ ಅವರು ಬಗರ್ ಹುಕುಂ ಸಮಿತಿ ಅಧ್ಯಕ್ಷರಾಗಿದ್ದರು. ಆಗ ಕಾನೂನು ಬಾಹೀರವಾಗಿ ಅನರ್ಹ ಫಲಾನುಭವಿಗಳಿಗೆ 2500 ಎಕರೆ ಗೋಮಾಳವನ್ನು ಹಂಚಿಕೆ ಮಾಡಿದ್ದಾರೆ ಎಂಬ ಆರೋಪ ಬಂದಿತ್ತು. ಅಶೋಕ್ ಸೇರಿ 10 ಜನರ ವಿರುದ್ಧ ಎಫ್.ಐ.ಆರ್. ಕೂಡ ದಾಖಲಾಗಿತ್ತು. ಅದಾದ ಬಳಿಕ 2019ರಿಂದ 2023ರವರೆಗೆ ಅವರು ಕಂದಾಯ ಸಚಿವರಾಗಿದ್ದರು. ಆಗ ಅವರು ರಾಜೀನಾಮೆ ಕೊಟ್ಟರೇನು? ಎಂದು ಪ್ರಶ್ನಿಸಿದರು.

ಲೊಟ್ಟೆ ಗೊಲ್ಲಹಳ್ಳಿಯ ಜಮೀನು ಡಿನೋಟಿಫಿಕೇಷನ್‌ಗೆ ಸಂಬಂಧಿಸಿದ ಮತ್ತೊಂದು ಆರೋಪವೂ ಅವರ ಮೇಲಿತ್ತು. ರಾಜಕೀಯದಲ್ಲಿ ಆಧಾರ ರಹಿತ ಆರೋಪಗಳೂ ಬರುತ್ತವೆ. ಪ್ರತಿಪಕ್ಷಗಳು ತಾಳ್ಮೆಯಿಂದ ಇರಬೇಕು ಎಂದು ಆರ್. ಅಶೋಕ್ ಅವರಿಗೆ ಕಿವಿಮಾತು ಹೇಳಿದರು. ಬಿಜೆಪಿ ಕಾರ್ಯಕಾಲದಲ್ಲಿ ಏನೆಲ್ಲಾ ಭ್ರಷ್ಟಾಚಾರ ನಡೆಯಿತು ಎಂಬುದು ರಾಜ್ಯದ ಜನತೆಗೆ ತಿಳಿದಿದೆ.

ಬಿಜೆಪಿಯವರಿಗೆ ಕದ್ದು ಮುಚ್ಚಿ ವ್ಯವಹಾರ ಮಾಡಿ ಅಭ್ಯಾಸವಾಗಿದೆ. ತಮ್ಮಂತೆಯೇ ಇತರರೂ ಭ್ರಷ್ಟಾಚಾರಿಗಳು ಎಂದು ಭಾವಿಸುತ್ತಾರೆ. ಹೀಗಾಗಿ ತಾವು ಮಾಡಿದ ಅವ್ಯವಹಾರವನ್ನೇ ಬೇರೆಯವರೂ ಮಾಡಿದ್ದಾರೆ ಎಂದುಕೊಂಡಿದ್ದಾರೆ. ಪಾಪ ಎಂದು ಈಶ್ವರ ಖಂಡ್ರೆ ವ್ಯಂಗ್ಯವಾಡಿದರು.

ಪ್ರತಿಪಕ್ಷಗಳಿಗೆ ಸರ್ಕಾರದ ವಿರುದ್ಧ ಆರೋಪ ಮಾಡಲು ಬೇರೆ ವಿಷಯವಿಲ್ಲ. ನಾನು ತಕ್ಷಣವೇ ತನಿಖೆಗೆ ಆದೇಶ ಕೊಟ್ಟ ಮೇಲೂ ಈ ರೀತಿ ಆರೋಪ ಮಾಡುವುದು ಪ್ರತಿಪಕ್ಷ ನಾಯಕರಿಗೆ ಶೋಭೆ ತರುವುದಿಲ್ಲ ಎಂದು ಈಶ್ವರ ಖಂಡ್ರೆ ಹೇಳಿದರು.

# 'ಮೆಟ್ರೋ ಪಿಲ್ಲರ್‌ಗಳ ಕೆಳಗೂ ರಸ್ತೆ ಕಾಮಗಾರಿ ನಡೆಸಿ'

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ವಿವಿಧೆಡೆ ನಡೆಯುತ್ತಿರುವ ವೈಟ್ ಟಾಪಿಂಗ್ ಹಾಗೂ ಡಾಂಬರೀಕರಣ ಕಾಮಗಾರಿಗಳ ನಡುವೆ ಮೆಟ್ರೋ ಪಿಲ್ಲರ್‌ಗಳ ಕೆಳಭಾಗದ ರಸ್ತೆಗಳನ್ನೂ ಅಭಿವೃದ್ಧಿಪಡಿಸುವಂತೆ ಸಾರ್ವಜನಿಕರು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರಿಗೆ ಮನವಿ ಮಾಡಿದ್ದಾರೆ.

ಜಾಲಹಳ್ಳಿ ಕ್ರಾಸ್‌ನಿಂದ ಗುರುಗುಂಟೆಪಾಳ್ಯ ಮೆಟ್ರೋ ಮಾರ್ಗದ ರಸ್ತೆಯಲ್ಲಿ ಒಂದು ಬದಿಯಲ್ಲಿ ಡಾಂಬರೀಕರಣ ಕಾಮಗಾರಿ ನಡೆಸಲಾಗುತ್ತಿದ್ದು,



ಮೆಟ್ರೋ ಪಿಲ್ಲರ್‌ಗಳ ಕೆಳಭಾಗದ ಜಾಗವನ್ನು ಹಾಗೆಯೇ ಬಿಡಲಾಗಿದೆ. ಇದರಿಂದ ರಸ್ತೆಯ ಒಂದು ಭಾಗ ಉತ್ತಮಗೊಂಡರೂ ಪಿಲ್ಲರ್‌ಗಳ ಕೆಳಗಿನ ಪ್ರದೇಶದಲ್ಲಿ ರಸ್ತೆ ಹದಗೆಟ್ಟ ಸ್ಥಿತಿಯಲ್ಲೇ ಉಳಿಯುವಂತಾಗಿದೆ ಎಂದು ಸಾರ್ವಜನಿಕರು ತಿಳಿಸಿದ್ದಾರೆ.

ಕಾಮಗಾರಿ ಸಂದರ್ಭದಲ್ಲಿ ಅಧಿಕಾರಿಗಳನ್ನು ಈ ಕುರಿತು ಪ್ರಶ್ನಿಸಿದಾಗ, ಮೆಟ್ರೋ ಮಾರ್ಗದ ಕೆಳಗಿನ ಜಾಗ ಬಿಎಂಆರ್‌ಸಿಎಲ್‌ಗೆ ಸಂಬಂಧಿಸಿದ್ದು, ಅಲ್ಲಿನ ರಸ್ತೆ ಕಾಮಗಾರಿಯನ್ನು ಅವರೇ ಮಾಡಬೇಕು ಎಂದು ತಿಳಿಸಿರುವುದಾಗಿ ಎಂ.ಎಸ್. ಹರೀಶ್ ಹೇಳಿದ್ದಾರೆ. ಮತ್ತೊಂದೆಡೆ, ಬಿಎಂಆರ್‌ಸಿಎಲ್ ಅಧಿಕಾರಿಗಳಿಂದಲೂ ಈ ಜಾಗ ಸರ್ಕಾರಕ್ಕೆ ಸೇರಿದ್ದು, ಸರ್ಕಾರವೇ ಕಾಮಗಾರಿ ಕೈಗೊಳ್ಳಬೇಕು ಎಂಬ ಮಾಹಿತಿ ದೊರೆತಿದೆ ಎಂದು ಅವರು ತಿಳಿಸಿದ್ದಾರೆ.

ಮೆಟ್ರೋ ಪಿಲ್ಲರ್‌ಗಳ ಕೆಳಭಾಗದಲ್ಲಿ ರಸ್ತೆ ಹದಗೆಟ್ಟಿರುವುದರಿಂದ ವಾಹನ ಸವಾರರು ಹಾಗೂ ಪಾದಚಾರಿಗಳಿಗೆ ತೊಂದರೆಯಾಗುತ್ತಿದೆ. ವಿಶೇಷವಾಗಿ ಮಳೆಗಾಲದಲ್ಲಿ ಗುಂಡಿಗಳಲ್ಲಿ ನೀರು ನಿಂತು ಸಂಚಾರಕ್ಕೆ ಅಡಚಣೆಯಾಗುವ ಜೊತೆಗೆ ಅಪಘಾತದ ಆತಂಕವೂ ಎದುರಾಗುತ್ತಿದೆ. ಒಂದೇ ರಸ್ತೆಯಲ್ಲಿ ಹೊಸದಾಗಿ ಡಾಂಬರೀಕರಣ ಮಾಡಿದ ಭಾಗದ ಪಕ್ಕದಲ್ಲೇ ಹದಗೆಟ್ಟ ರಸ್ತೆ ಉಳಿದಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಹೀಗಾಗಿ ಮೆಟ್ರೋ ಪಿಲ್ಲರ್‌ಗಳ ಕೆಳಭಾಗದ ರಸ್ತೆ ಕಾಮಗಾರಿಯ ಜವಾಬ್ದಾರಿ ಯಾರದ್ದು ಎಂಬುದನ್ನು ಸ್ಪಷ್ಟಪಡಿಸಿ, ಸಂಬಂಧಪಟ್ಟ ಇಲಾಖೆಗಳ ನಡುವೆ ಸಮನ್ವಯ ಸಾಧಿಸುವ ಮೂಲಕ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಈ ಬಗ್ಗೆ ಸಚಿವರು ತಕ್ಷಣ ಗಮನಹರಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು ಎಂದು ಹರೀಶ್ ಮನವಿ ಮಾಡಿದ್ದಾರೆ.

# ಎಥೆನಾಲ್‌ಗೆ ಭಾರೀ ಬೇಡಿಕೆ: ರಾಜ್ಯದಲ್ಲಿ 42 ಹೊಸ ಸಕ್ಕರೆ ಕಾರ್ಖಾನೆಗಳಿಗೆ ಅರ್ಜಿ

● ವಿಕ್ರಮ ವಾಹಿನಿ । ಬೆಂಗಳೂರು/ಬೆಳಗಾವಿ

ಪರ್ಯಾಯ ಇಂಧನವಾಗಿ ಎಥೆನಾಲ್‌ಗೆ ದೇಶಾದ್ಯಂತ ಬೇಡಿಕೆ ಹೆಚ್ಚುತ್ತಿರುವ ಬೆನ್ನಲ್ಲೇ ಕರ್ನಾಟಕದಲ್ಲಿ ಹೊಸ ಸಕ್ಕರೆ ಕಾರ್ಖಾನೆಗಳ ಸ್ಥಾಪನೆಗೆ ಉದ್ಯಮಿಗಳು ಹಾಗೂ ಹೂಡಿಕೆದಾರರು ಹೆಚ್ಚಿನ ಆಸಕ್ತಿ ತೋರಿದ್ದಾರೆ. ರಾಜ್ಯದಲ್ಲಿ ಹೊಸ ಸಕ್ಕರೆ ಕಾರ್ಖಾನೆಗಳನ್ನು ಸ್ಥಾಪಿಸಲು ಅನುಮತಿ ಕೋರಿ ಒಟ್ಟು 42 ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಸಕ್ಕರೆ ಆಯುಕ್ತಾಲಯ ತಿಳಿಸಿದೆ.

ಕೇಂದ್ರ ಸರ್ಕಾರ ಎಥೆನಾಲ್ ಮಿಶ್ರಿತ ಇಂಧನ ಬಳಕೆಗೆ ಹೆಚ್ಚಿನ ಒತ್ತು ನೀಡುತ್ತಿರುವ ಹಿನ್ನೆಲೆಯಲ್ಲಿ ಮಾರುಕಟ್ಟೆಯಲ್ಲಿ ಎಥೆನಾಲ್‌ಗೆ ಬೇಡಿಕೆ ಹೆಚ್ಚಾಗಿದೆ. ಇದರಿಂದ ಕಬ್ಬು ಆಧಾರಿತ ಸಕ್ಕರೆ ಕಾರ್ಖಾನೆಗಳ ಜೊತೆಗೆ ಎಥೆನಾಲ್ ಉತ್ಪಾದನಾ ಘಟಕಗಳ ಸ್ಥಾಪನೆಗೂ ಉದ್ಯಮಿಗಳು ಮುಂದಾಗುತ್ತಿದ್ದಾರೆ.

ಸಲ್ಲಿಕೆಯಾಗಿರುವ 42 ಅರ್ಜಿಗಳ ಪೈಕಿ ಬಹುತೇಕವು ಕಿತ್ತೂರು ಹಾಗೂ ಕಲ್ಯಾಣ ಕರ್ನಾಟಕ ಭಾಗಗಳಿಗೆ ಸೇರಿವೆ. ಬೆಳಗಾವಿ ಜಿಲ್ಲೆಯಿಂದ 13, ವಿಜಯಪುರದಿಂದ 8, ಕಲಬುರಗಿಯಿಂದ 6, ಬಾಗಲಕೋಟೆಯಿಂದ 4 ಹಾಗೂ ಧಾರವಾಡ ಜಿಲ್ಲೆಯಿಂದ 4 ಅರ್ಜಿಗಳು ಬಂದಿವೆ. ಉಳಿದ ಅರ್ಜಿಗಳು ಇತರ ಜಿಲ್ಲೆಗಳಿಗೆ ಸಂಬಂಧಿಸಿವೆ.

ಹೊಸ ಕಾರ್ಖಾನೆಗಳ ಸ್ಥಾಪನೆಯಿಂದ ಕಬ್ಬು ಬೆಳೆಗಾರರಿಗೆ ಮಾರುಕಟ್ಟೆ ವಿಸ್ತರಿಸುವುದರ ಜೊತೆಗೆ ಗ್ರಾಮೀಣ ಭಾಗದಲ್ಲಿ ಉದ್ಯೋಗಾವಕಾಶಗಳೂ ಹೆಚ್ಚಾಗುವ ನಿರೀಕ್ಷೆ ಇದೆ.

ಎಥೆನಾಲ್ ಉತ್ಪಾದನೆಗೆ ಅನುಕೂಲವಾಗುವ ಕಬ್ಬು ಲಭ್ಯತೆ ಹಾಗೂ ಪರ್ಯಾಯ ಇಂಧನಕ್ಕೆ ಹೆಚ್ಚುತ್ತಿರುವ ಬೇಡಿಕೆ ಹೊಸ ಸಕ್ಕರೆ ಕಾರ್ಖಾನೆಗಳ ಸ್ಥಾಪನೆಗೆ ಪ್ರಮುಖ ಕಾರಣವಾಗಿದೆ. ಅರ್ಜಿಗಳ ಪರಿಶೀಲನೆ ಬಳಿಕ ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಗಳು ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಿವೆ.

# ರೋಡ್ ಮಾಡು ಟೋಲ್ ಹಾಕು ನೀತಿ: ತೇಜಸ್ವಿ ಸೂರ್ಯ

● ವಿಕ್ರಮ ವಾಹಿನಿ । ಬೆಂಗಳೂರು

ರೋಡ್ ಮಾಡು ಟೋಲ್ ಹಾಕು; ಟ್ರಾಫಿಕ್ ಕಡಿಮೆ ಮಾಡುತ್ತೇವೆ ಎಂಬುದೇ ಇವರ ಬ್ಯುಸಿನೆಸ್ ಆಗಿದೆ ಎಂದು ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಅವರು ಟೀಕಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬೆಂಗಳೂರಿನ ಕೆರೆ ಉಳಿಸಲು ನಾವು ಆಂದೋಲನ ಮಾಡಬೇಕಿದೆ. ಕೆರೆ ಉಳಿಯಬೇಕು ಎಂದರೆ ನಾವು ಹೋರಾಟ ಮಾಡಬೇಕಿದೆ ಎಂದು ತಿಳಿಸಿದರು. ಪಾರ್ಕ್ ಜಾಗ ಕಬ್ಜಾ ಮಾಡಲು ಸರ್ಕಾರ ಕಾನೂನು ತಂದಿತ್ತು ಎಂದರು.

ನಮಗೀಗ ತಾತ್ಕಾಲಿಕ ಜಯ: ಬೆಂಗಳೂರು ಜನ ಇದನ್ನ ವಿರೋಧಿಸಿದರು. ಪಾರ್ಕ್‌ಗಳನ್ನು ಉಳಿಸಲು ಜನ ಜನಾಂದೋಲನ ಮಾಡಿದರು. 91 ವರ್ಷದ ಯಲ್ಲಪ್ಪ ರೆಡ್ಡಿ ಅವರ ನೇತೃತ್ವದಲ್ಲಿ ಆಂದೋಲನ ನಡೆಯಿತು. ಈಗ ತಾತ್ಕಾಲಿಕವಾಗಿ ನಮಗೆ ಜಯ ಸಿಕ್ಕಿದೆ ಎಂದು ವಿವರಿಸಿದರು.

ಪಾರ್ಕ್ ಮತ್ತು ಕೆರೆಯ ಮೇಲೆ ದಾಳಿ: ಈ ಸರ್ಕಾರಕ್ಕೆ ಟನಲ್ ಕೊರೆಯಲು ಯಾರು ಹೇಳಿದ್ದಾರೋ ಗೊತ್ತಿಲ್ಲ. ಹೆಬ್ಬಾಳ್ ಲೇಕ್ ಜಾಗವನ್ನು ಮತ್ತು ಬಫರ್ ವಲಯದ ಸುರಂಗಕ್ಕೆ ಬಳಕೆ ಮಾಡ್ತಿದ್ದಾರೆ. ಈ ಶಾರ್ಟ್ ಟನಲ್ ಮಾಡ್ತಿರೋದಕ್ಕೆ ಈ ಜಾಗ ಬಳಕೆ ಮಾಡ್ತಿದ್ದಾರೆ. ಕಳೆದ ವರ್ಷ ಲೇಕ್ ಬಿಲ್ ತಂದಿದ್ದರು. ಸುಪ್ರೀಂ ಕೋರ್ಟ್‌ನ ಕಾನೂನಿಗೆ ವಿರುದ್ಧ ಇದೆ ಎಂದು ಮಾನ್ಯ ರಾಜ್ಯಪಾಲರು ಮಸೂದೆ ಹಿಂತಿರುಗಿಸಿದ್ದರು. ಈಗ ಪುನಃ ಮತ್ತೆ ಅದೇ ಬಿಲ್ ಪಾಸ್ ಮಾಡಿದ್ದಾರೆ ಎಂದು ದೂರಿದರು. ಹೆಬ್ಬಾಳದಲ್ಲಿ 3.5 ಎಕರೆ ಜಾಗದಲ್ಲಿ ಕಾಮಗಾರಿ ನಡಿತಿದೆ. ಪಾರ್ಕ್ ಮತ್ತು ಕೆರೆಯ ಮೇಲೆ ದಾಳಿ ಮಾಡಿದ್ದಾರೆ ಎಂದು ಟೀಕಿಸಿದರು.



ಸರ್ಕಾರ ಯಾವುದೇ ಯೋಜನೆ ಮಾಡಬೇಕಾದರೂ ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದು ಬಿಎಂಎಲ್‌ಟಿಎ ಕಾನೂನು ಹೇಳುತ್ತದೆ. ಬೆಂಗಳೂರಿನ ಹಿತರಕ್ಷಣೆಗೆ ಇದ್ದ ಮೂರು ಕಾನೂನಿನ ಮೇಲೆ ಸರ್ಕಾರ ದಾಳಿ ಮಾಡಿದೆ ಎಂದು ಆಕ್ಷೇಪಿಸಿದರು. ಸರ್ಕಾರ ಫ್ಲೈ ಓವರ್‌ನಲ್ಲಿ 2 ವೀಲರ್ ಓಡಾಟ ನಿಷೇಧ ಮಾಡಿದೆ. ಸುರಕ್ಷತೆಯ ಕಾರಣ ಎಂದು ಹೇಳಿದ್ದಾರೆ ಎಂದು ಅವರು ಟೀಕಿಸಿದರು.

# ಪಿಂಡ್ಲಿ ಉತ್ಸವದಲ್ಲಿ ಪಾಲ್ಗೊಂಡ ಶ್ರೀ ಸುಬುಧೇಂದ್ರ ತೀರ್ಥರು; ಮಡಿಕೆ ಒಡೆದು ಸಂಭ್ರಮ

● ವಿಕ್ರಮ ವಾಹಿನಿ । ರಾಯಚೂರು

ಮಂತ್ರಾಲಯದ ಶ್ರೀ ಗುರುರಾಘವೇಂದ್ರ ಸ್ವಾಮಿ ಮಠದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಹಬ್ಬವನ್ನು ಸಡಗರ ಹಾಗೂ ಭಕ್ತಿಭಾವದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥರ ನೇತೃತ್ವದಲ್ಲಿ ವಿವಿಧ ಧಾರ್ಮಿಕ ಹಾಗೂ ಸಾಂಪ್ರದಾಯಿಕ ಕಾರ್ಯಕ್ರಮಗಳು ನೆರವೇರಿದವು.

ಶ್ರೀಕೃಷ್ಣನ ವಿಶೇಷ ಪೂಜಾ ಕೈಂಕರ್ಯಕ್ಕೂ ಮುನ್ನ ಮಠದ ಆವರಣದಲ್ಲಿ ಪಿಂಡ್ಲಿ ಉತ್ಸವವನ್ನು ಸಂಭ್ರಮದಿಂದ ಆಯೋಜಿಸಲಾಗಿತ್ತು. ಸ್ವತಃ ಶ್ರೀ ಸುಬುಧೇಂದ್ರ ತೀರ್ಥರು ಉತ್ಸವದಲ್ಲಿ ಪಾಲ್ಗೊಂಡು



ಮೊಸರು, ಹಾಲು ಹಾಗೂ ಬೆಣ್ಣೆಯಿಂದ ತುಂಬಿದ್ದ ಮಡಿಕೆಯನ್ನು ಒಡೆದು ಸಂಭ್ರಮಿಸಿದರು.

ಪಿಂಡ್ಲಿ ಉತ್ಸವದ ಬಳಿಕ ಮಠದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ವಿಶೇಷ ಪೂಜೆ, ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಭಕ್ತರು ಭಕ್ತಿಭಾವದಿಂದ ಪೂಜಾ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಶ್ರೀಕೃಷ್ಣನ ದರ್ಶನ ಪಡೆದು ಪ್ರಸಾದ ಸ್ವೀಕರಿಸಿದರು. ಜನ್ಮಾಷ್ಟಮಿ ಹಿನ್ನೆಲೆಯಲ್ಲಿ ಮಠದ ಆವರಣದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದ್ದು, ಸಾಂಪ್ರದಾಯಿಕ ಆಚರಣೆಗಳು ಭಕ್ತರಲ್ಲಿ ವಿಶೇಷ ಉತ್ಸಾಹ ಮೂಡಿಸಿದವು.

# ಗೋ ಪೂಜೆಯೊಂದಿಗೆ ಆರಂಭಗೊಂಡ ಪಾದಯಾತ್ರೆ ಕಾರಟಗಿಯಲ್ಲಿ ಸಮಾಪ್ತಿ

## 'ಪಂಚ ಗ್ಯಾರಂಟಿ' ಭ್ರಮೆಯಲ್ಲಿ ಕಾಂಗ್ರೆಸ್-ಬಡವರ ಬದುಕು ಮರೆತಿದೆ: ವಿಜಯೇಂದ್ರ

● ವಿಕ್ರಮ ವಾಹಿನಿ । ಕಾರಟಗಿ

ಕೃಷ್ಣಾಷ್ಟಮಿಯ ಹಿನ್ನೆಲೆಯಲ್ಲಿ ಗೋ ಪೂಜೆ ನೆರವೇರಿಸುವ ಮೂಲಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಆರಂಭಗೊಂಡ ನಾಲ್ಕನೇ ದಿನದ ಪಾದಯಾತ್ರೆ ಶುಕ್ರವಾರ ಕಾರಟಗಿಯಲ್ಲಿ ಸಮಾಪ್ತಿಯಾಯಿತು. ಸುಮಾರು 22 ಕಿ.ಮೀ. ಸಾಗಿದ ಪಾದಯಾತ್ರೆಯಲ್ಲಿ ರೈತರು, ಮಹಿಳೆಯರು, ಯುವಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದರು.

ಸಿಂಧನೂರಿನಲ್ಲಿ ಮಾತನಾಡಿದ ವಿಜಯೇಂದ್ರ, ಪಂಚ ಗ್ಯಾರಂಟಿಗಳ ಭ್ರಮೆಯಲ್ಲಿ ತೇಲುತ್ತಿರುವ ಕಾಂಗ್ರೆಸ್ ಸರ್ಕಾರ ರಾಜ್ಯದ ಕಡುಬಡವರು, ವೃದ್ಧರು, ಅಂಗವಿಕಲರು ಹಾಗೂ ದುರ್ಬಲ ವರ್ಗದ ಜನರ ಸಮಸ್ಯೆಗಳನ್ನು ನಿರ್ಲಕ್ಷಿಸಿದೆ ಎಂದು ಆರೋಪಿಸಿದರು.

ವೃದ್ಧಾಪ್ಯ ವೇತನ, ಅಂಗವಿಕಲರ ಮಾಸಾಶನ ಸೇರಿದಂತೆ ಸಾಮಾಜಿಕ ಭದ್ರತಾ ಪಿಂಚಣಿಗಳು ಹಲವು ತಿಂಗಳಿಂದ ಫಲಾನುಭವಿಗಳಿಗೆ ತಲುಪದೆ ಇರುವುದರಿಂದ ಬಡ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ಸರ್ಕಾರದ ಯೋಜನೆಗಳು ಕಾಗದದಲ್ಲೇ ಉಳಿಯದೆ ಅರ್ಹರಿಗೆ ಸಮಯಕ್ಕೆ ಸರಿಯಾಗಿ ತಲುಪಬೇಕು ಎಂದು ಆಗ್ರಹಿಸಿದರು.

**ರೈತರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಲಿ**

ಪಾದಯಾತ್ರೆಯ ವೇಳೆ ರೈತರೊಂದಿಗೆ ಸಂವಾದ ನಡೆಸಿದ ವಿಜಯೇಂದ್ರ, ಕೃಷಿ ವೆಚ್ಚ ಹೆಚ್ಚಳ, ಕಾರ್ಮಿಕರ ಕೊರತೆ, ಬೆಳೆ ಬೆಲೆಗಳ ಅನಿಶ್ಚಿತತೆ ಹಾಗೂ ನೀರಾವರಿ ಸಮಸ್ಯೆಗಳಿಂದ ರೈತರು ಸಂಕಷ್ಟದಲ್ಲಿದ್ದಾರೆ ಎಂದರು.

ರೈತರಿಗೆ ಗುಣಮಟ್ಟದ ಬೀಜ, ರಸಗೊಬ್ಬರ, ವಿದ್ಯುತ್, ನೀರಾವರಿ, ಬೆಳೆ ವಿಮೆ ಹಾಗೂ ನ್ಯಾಯಯುತ ಬೆಲೆ ದೊರೆಯುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು. ಸಣ್ಣ ಮತ್ತು ಅತಿಸಣ್ಣ ರೈತರಿಗೆ ಕೃಷಿ ಯಂತ್ರೋಪಕರಣಗಳು ಸುಲಭವಾಗಿ ದೊರೆಯುವಂತೆ ಸಾಲ ಹಾಗೂ ಸಹಾಯಧನ ಒದಗಿಸಬೇಕು ಎಂದು ಒತ್ತಾಯಿಸಿದರು.

ಹೊಸ ಭತ್ತ ಕೊಯ್ಲು ಯಂತ್ರಕ್ಕೆ ಪೂಜೆ ಸಲ್ಲಿಸಿ ಚಾಲನೆ ನೀಡಿದ ಅವರು, ಕೃಷಿಯಲ್ಲಿ ಯಾಂತ್ರೀಕರಣಕ್ಕೆ ಹೆಚ್ಚಿನ ಉತ್ತೇಜನ ನೀಡುವ ಅಗತ್ಯವಿದೆ ಎಂದರು.

**ಎಪಿಎಂಸಿ ಸಮಸ್ಯೆ ಆಲಿಕೆ**

ಸಿಂಧನೂರು ಸಮೀಪ ಎಪಿಎಂಸಿ ವರ್ತಕರೊಂದಿಗೆ ವಿಜಯೇಂದ್ರ ಸಂವಾದ ನಡೆಸಿದರು. ಜಾಗ ಹಾಗೂ ಮಳಿಗೆ ವರ್ಗಾವಣೆಗೆ ವಿಧಿಸಲಾಗುತ್ತಿರುವ ಹೆಚ್ಚುವರಿ ಶುಲ್ಕ, ಪರವಾನಗಿ ಮತ್ತು ದಾಖಲೆಗಳ ಸಮಸ್ಯೆ, ಬ್ಯಾಂಕ್ ಸಾಲ ಪಡೆಯುವಲ್ಲಿನ ಅಡಚಣೆ ಸೇರಿದಂತೆ ಹಲವು ಸಮಸ್ಯೆಗಳನ್ನು ವರ್ತಕರು ಅವರ ಗಮನಕ್ಕೆ ತಂದರು.



ದೇವರಾಜ ಅರಸು ತರಕಾರಿ ಮಾರುಕಟ್ಟೆಯಲ್ಲಿನ ಕುಡಿಯುವ ನೀರು, ಶೌಚಾಲಯ, ಸ್ವಚ್ಛತೆ, ವಾಹನ ನಿಲುಗಡೆ ಸೇರಿದಂತೆ ಮೂಲಸೌಕರ್ಯಗಳ ಕೊರತೆಯ ಬಗ್ಗೆಯೂ ದೂರುಗಳು ಬಂದವು. ಈ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರಕ್ಕಾಗಿ ಹೋರಾಡುವುದಾಗಿ ವಿಜಯೇಂದ್ರ ಭರವಸೆ ನೀಡಿದರು.

**ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಆದ್ಯತೆ ಅಗತ್ಯ**

ಕಲ್ಯಾಣ ಕರ್ನಾಟಕದ ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯರು, ಶಿಕ್ಷಕರು ಹಾಗೂ ಉದ್ಯೋಗಾವಕಾಶಗಳ ಕೊರತೆ ಮುಂದುವರಿದಿದೆ. ಯುವಕರು ಉದ್ಯೋಗಕ್ಕಾಗಿ ಬೆಂಗಳೂರು ಸೇರಿದಂತೆ ಇತರ ನಗರಗಳಿಗೆ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಸ್ಥಳೀಯವಾಗಿ ಕೈಗಾರಿಕೆಗಳು, ಕೃಷಿ ಆಧಾರಿತ ಸಂಸ್ಕರಣಾ ಘಟಕಗಳು ಹಾಗೂ ಕೌಶಲ್ಯಾಭಿವೃದ್ಧಿ ಕೇಂದ್ರಗಳನ್ನು ಸ್ಥಾಪಿಸಿ ಉದ್ಯೋಗ ಸೃಷ್ಟಿಸಬೇಕು ಎಂದು ಹೇಳಿದರು.

ಲಿಂಗಸುಗೂರಿನಿಂದ ಬಳ್ಳಾರಿವರೆಗೆ ನಡೆಯುತ್ತಿರುವ ಪಾದಯಾತ್ರೆ ಕೇವಲ ರಾಜಕೀಯ ಕಾರ್ಯಕ್ರಮವಲ್ಲ. ರೈತರು, ಬಡವರು, ಕಾರ್ಮಿಕರು, ಮಹಿಳೆಯರು, ಯುವಕರು ಹಾಗೂ ವ್ಯಾಪಾರಿಗಳ ಸಮಸ್ಯೆಗಳನ್ನು ನೇರವಾಗಿ ಆಲಿಸಿ, ಅವುಗಳಿಗೆ ಪರಿಹಾರಕ್ಕಾಗಿ ಹೋರಾಡುವ ಜನಪರ ಕಾರ್ಯಕ್ರಮವಾಗಿದೆ ಎಂದು ವಿಜಯೇಂದ್ರ ತಿಳಿಸಿದರು.

**2028ರಲ್ಲಿ ಬಿಜೆಪಿ ಸರ್ಕಾರ: ವಿಜಯೇಂದ್ರ ವಿಶ್ವಾಸ**

2028ರಲ್ಲಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುವುದು ಖಚಿತ ಎಂದು ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು. ಬಿಜೆಪಿ ಅಧಿಕಾರಕ್ಕೆ ಬಂದರೆ ಕೃಷಿ, ನೀರಾವರಿ, ಗ್ರಾಮೀಣಾಭಿವೃದ್ಧಿ, ಶಿಕ್ಷಣ, ಆರೋಗ್ಯ ಹಾಗೂ ಉದ್ಯೋಗ ಕ್ಷೇತ್ರಗಳಿಗೆ ಆದ್ಯತೆ ನೀಡಲಾಗುವುದು. ಕಲ್ಯಾಣ ಕರ್ನಾಟಕದ ಪ್ರಾದೇಶಿಕ ಅಸಮಾನತೆ ನಿವಾರಣೆಗೆ ವಿಶೇಷ ಕ್ರಮ ಕೈಗೊಳ್ಳಲಾಗುವುದು ಎಂದರು.

ಪಾದಯಾತ್ರೆಯಲ್ಲಿ ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವ ಬಿ. ಶ್ರೀರಾಮುಲು, ಶಾಸಕರಾದ ಮಹೇಶ್ ಟೆಂಗಿನಕಾಯಿ, ಕೃಷ್ಣನಾಯಕ್, ಹಾಲಪ್ಪ ಆಚಾರ್, ಮಾಜಿ ಶಾಸಕರಾದ ಬಸವರಾಜ ದಡೇಸೂಗೂರು, ರಾಜುಗೌಡ ಶಿವನಗೌಡ ನಾಯಕ್ ಸೇರಿದಂತೆ ಹಲವು ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

### ಪಾದಯಾತ್ರೆಯ ಪ್ರಮುಖ ಹೈಲೈಟ್ಸ್

- ಕೃಷ್ಣಾಷ್ಟಮಿ ಹಿನ್ನೆಲೆಯಲ್ಲಿ ಗೋ ಪೂಜೆ ನೆರವೇರಿಸಿ ನಾಲ್ಕನೇ ದಿನದ ಪಾದಯಾತ್ರೆಗೆ ಚಾಲನೆ
- ರೈತ ತಂದಿದ್ದ ಹೊಸ ಭತ್ತ ಕೊಯ್ಲು ಯಂತ್ರಕ್ಕೆ ಪೂಜೆ ಸಲ್ಲಿಸಿ ಚಾಲನೆ
- ರೈತರೊಂದಿಗೆ ಕೃಷಿ ವೆಚ್ಚ, ಬೆಳೆ ಬೆಲೆ, ನೀರಾವರಿ ಮತ್ತು ಯಾಂತ್ರೀಕರಣದ ಕುರಿತು ಚರ್ಚೆ
- ವೃದ್ಧಾಪ್ಯ ವೇತನ ಬಾರದ ವೃದ್ಧರೊಂದಿಗೆ ನೇರ ಸಂವಾದ
- ಸಾಮಾಜಿಕ ಭದ್ರತಾ ಪಿಂಚಣಿಗಳ ವಿಳಂಬದ ಕುರಿತು ಫಲಾನುಭವಿಗಳ ಅಹವಾಲು ಆಲಿಕೆ
- ಸಿಂಧನೂರು ಸಮೀಪ ಎಪಿಎಂಸಿ ವರ್ತಕರೊಂದಿಗೆ ಸಂವಾದ
- ಎಪಿಎಂಸಿ ಮಳಿಗೆ ವರ್ಗಾವಣೆ ಶುಲ್ಕ, ದಲ್ಲಾಳಿ ವ್ಯವಸ್ಥೆ ಮತ್ತು ಬ್ಯಾಂಕ್ ಸಾಲದ ಸಮಸ್ಯೆಗಳ ಕುರಿತು ಚರ್ಚೆ
- ದೇವರಾಜ ಅರಸು ತರಕಾರಿ ಮಾರುಕಟ್ಟೆಯ ಮೂಲಸೌಕರ್ಯ ಕೊರತೆಗಳ ಪರಿಶೀಲನೆ
- ಕಲ್ಯಾಣ ಕರ್ನಾಟಕದ ಆಸ್ಪತ್ರೆ, ಶಾಲೆ ಮತ್ತು ಉದ್ಯೋಗ ಸಮಸ್ಯೆಗಳ ಕುರಿತು ಸರ್ಕಾರದ ವಿರುದ್ಧ ಟೀಕೆ
- ಗ್ರಾಮೀಣ ಭಾಗಗಳಲ್ಲಿ ವೈದ್ಯರು ಮತ್ತು ಶಿಕ್ಷಕರ ಕೊರತೆಯ ಪ್ರಸ್ತಾಪ
- ಯುವಕರ ವಲಸೆ ತಡೆಯಲು ಸ್ಥಳೀಯ ಉದ್ಯೋಗಾವಕಾಶ ಸೃಷ್ಟಿಸುವಂತೆ ಆಗ್ರಹ
- ಕೊಪ್ಪಳ ಜಿಲ್ಲೆ ಪ್ರವೇಶಿಸುತ್ತಿದ್ದಂತೆ ಕಾರ್ಯಕರ್ತರಿಂದ ಅದ್ದೂರಿ ಸ್ವಾಗತ
- ಮಹಿಳೆಯರಿಂದ ಪೂರ್ಣಕುಂಭ ಸ್ವಾಗತ ಮತ್ತು ಅಭಿಮಾನಿಗಳಿಂದ ಬೃಹತ್ ಹಾರ ಅರ್ಪಣೆ
- ರೈತರು, ಮಹಿಳೆಯರು, ಯುವಕರು, ಕಾರ್ಮಿಕರು ಮತ್ತು ವರ್ತಕರೊಂದಿಗೆ ನೇರ ಸಂವಾದ
- ಸುಮಾರು 22 ಕಿ.ಮೀ. ಕ್ರಮಿಸಿದ ನಾಲ್ಕನೇ ದಿನದ ಪಾದಯಾತ್ರೆ
- ಕೊಪ್ಪಳ ಜಿಲ್ಲೆಯ ಕಾರಟಗಿಯಲ್ಲಿ ಪಾದಯಾತ್ರೆಯ ಸಮಾಪ್ತಿ
- "ಜನರ ಸಮಸ್ಯೆಗಳಿಗೆ ಧ್ವನಿಯಾಗಿ ವಿಧಾನಸಭೆಯಲ್ಲಿ ಕೆಲಸ ಮಾಡುತ್ತೇನೆ"
- "2028ರಲ್ಲಿ ಬಿಜೆಪಿ ಸರ್ಕಾರ ಖಚಿತ; ರೈತರು, ಬಡವರು, ಯುವಕರು ಹಾಗೂ ವರ್ತಕರ ಸಮಸ್ಯೆಗಳಿಗೆ ಆದ್ಯತೆ"

# 25 ದಿನಗಳಲ್ಲಿ ಬಿಜೆಪಿಗೆ ನಾಲ್ಕು ಯಶಸ್ಸು

● ವಿಕ್ರಮ ವಾಹಿನಿ । ಬೆಂಗಳೂರು

ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧ ಬಿಜೆಪಿ ನಡೆಸಿದ ನಿರಂತರ ಹೋರಾಟದ ಫಲವಾಗಿ ಕಳೆದ 25 ದಿನಗಳಲ್ಲಿ ಪಕ್ಷವು ನಾಲ್ಕು ಪ್ರಮುಖ ಯಶಸ್ಸುಗಳನ್ನು ಸಾಧಿಸಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ಶುಕ್ರವಾರ ಹೇಳಿಕೆ ನೀಡಿರುವ ಅವರು, ವಿಧಾನಮಂಡಲದ ಉಭಯ ಸದನಗಳಲ್ಲಿ ಬಿಜೆಪಿ ನಡೆಸಿದ ಧರಣಿಯ ಪರಿಣಾಮವಾಗಿ ಬಿ. ನಾಗೇಂದ್ರ ಅವರ ರಾಜೀನಾಮೆ ಪಡೆಯುವಲ್ಲಿ ಪಕ್ಷ ಯಶಸ್ವಿಯಾಯಿತು. ಅಲ್ಲದೆ, ಬಿಜೆಪಿ ಬೀದಿಗಿಳಿದು ಹೋರಾಟ ನಡೆಸಿದ ಬಳಿಕ ಮುಖ್ಯಮಂತ್ರಿ ಹಾಗೂ ಸಚಿವರು ಬರಪೀಡಿತ ಜಿಲ್ಲೆಗಳಿಗೆ ಭೇಟಿ ನೀಡುವಂತೆ ಸರ್ಕಾರವನ್ನು ಒತ್ತಾಯಿಸಲು ಸಾಧ್ಯವಾಯಿತು ಎಂದು ತಿಳಿಸಿದ್ದಾರೆ.

ಪಾರ್ಕ್ ಬಿಲ್ ಹಿಂಪಡೆಯುವಂತೆ ಸರ್ಕಾರವನ್ನು ಒತ್ತಾಯಿಸುವಲ್ಲಿಯೂ ಬಿಜೆಪಿ ಯಶಸ್ವಿಯಾಗಿದೆ. ಇದರಿಂದ ಸರ್ಕಾರ ತನ್ನ ನಿಲುವಿನಿಂದ ಹಿಂದೆ ಸರಿಯುವಂತಾಯಿತು ಎಂದು ವಿಜಯೇಂದ್ರ ಹೇಳಿದ್ದಾರೆ.

ಇದೇ ವೇಳೆ, ಬರ ಸೇರಿದಂತೆ ರಾಜ್ಯದ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸಲು ವಿಧಾನಮಂಡಲದ ವಿಶೇಷ ಅಧಿವೇಶನ ಕರೆಯುವಂತೆ ಸರ್ಕಾರದ ಮೇಲೆ ಒತ್ತಡ ಹೇರುವಲ್ಲಿಯೂ ಬಿಜೆಪಿ ಯಶಸ್ವಿಯಾಗಿದೆ. ಈ ನಾಲ್ಕೂ ಬೆಳವಣಿಗೆಗಳು ಬಿಜೆಪಿಯ ನಿರಂತರ ಹೋರಾಟದ ಫಲ ಎಂದು ಅವರು ಪ್ರತಿಪಾದಿಸಿದ್ದಾರೆ.

"ಇದೇ ಶಕ್ತಿಯುತ ಜನಾಂದೋಲನದ ಅರ್ಥ. ಸತತ ಯಶಸ್ಸುಗಳು ಪಕ್ಷದ ಕಾರ್ಯಕರ್ತರಲ್ಲಿ ಮತ್ತಷ್ಟು ಉತ್ಸಾಹ ತುಂಬಿವೆ. ಯಶಸ್ಸಿನಂತೆ ಯಶಸ್ಸನ್ನು ಮತ್ತಾವುದೂ ತಂದುಕೊಡದು.

ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧದ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸಲು ಈ ಯಶಸ್ಸುಗಳು ಬಿಜೆಪಿಗೆ ಶಕ್ತಿ ನೀಡಲಿವೆ" ಎಂದು ವಿಜಯೇಂದ್ರ ತಿಳಿಸಿದ್ದಾರೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 156,